ತುಂಗ ಬಿಂಬ

ಸತ್ಯ ಮತ್ತು ಧೈರ್ಯದ ಧ್ವನಿ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 136 | ರಾಯಚೂರು Raichur 07-11-2026 | ಶನಿವಾರ Saturday | ಪುಟ: Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685



ಎಸ್‌ಐಆರ್ ಕರಡು ಮತದಾರರ ಪಟ್ಟಿಯಿಂದ ಕೈಬಿಟ್ಟವರಿಗೆ ಮತ್ತೊಂದು ಅವಕಾಶ: ಚುನಾವಣಾ ಆಯೋಗದಿಂದ ವಿಶೇಷ ಅಭಿಯಾನ

ನವದೆಹಲಿ, ನ.6: ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಕರಡು ಪಟ್ಟಿಯಿಂದ ಹೆಸರುಗಳನ್ನು ಕೈಬಿಡಲಾದ ಅರ್ಹ ಮತದಾರರನ್ನು ಪತ್ತೆಹಚ್ಚಿ, ಅಂತಿಮ ಮತದಾರರ ಪಟ್ಟಿಗೆ ಸೇರಿಸಲು ಮತ್ತೊಂದು ಅವಕಾಶ ಕಲ್ಪಿಸುವಂತೆ ಕೇಂದ್ರ ಚುನಾವಣಾ ಆಯೋಗವು ಸಂಬಂಧಪಟ್ಟ ರಾಜ್ಯಗಳ ಚುನಾವಣಾಧಿಕಾರಿಗಳಿಗೆ ನಿರ್ದೇಶನ ನೀಡಿದೆ.

ದೆಹಲಿ, ಹರಿಯಾಣ, ಮಹಾರಾಷ್ಟ್ರ, ನಾಗಾಲ್ಯಾಂಡ್, ಆಂಧ್ರಪ್ರದೇಶ, ತೆಲಂಗಾಣ ಹಾಗೂ ಜಾರ್ಖಂಡ್ ರಾಜ್ಯಗಳಲ್ಲಿ ಈ ವಿಶೇಷ ಅಭಿಯಾನ ಕೈಗೊಳ್ಳುವಂತೆ ನವೆಂಬರ್ 6ರಂದು ಆಯೋಗ ಸೂಚಿಸಿದೆ.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಗಣತಿ ನಮೂನೆಗಳನ್ನು ವಿತರಿಸಲಾಗಿದ್ದರೂ, ಪರಿಶೀಲನೆ ಸಂದರ್ಭದಲ್ಲಿ ಗೈರುಹಾಜರಿ, ಸ್ಥಳಾಂತರ, ಮೃತಪಟ್ಟವರು ಅಥವಾ ನಕಲಿ ನೋಂದಣಿ ಎಂಬ ಕಾರಣಗಳಿಂದ ಕರಡು ಮತದಾರರ ಪಟ್ಟಿಯಿಂದ ಹೊರಗುಳಿದವರ ಮಾಹಿತಿಯನ್ನು ಮತ್ತೊಮ್ಮೆ ಪರಿಶೀಲಿಸಲು ನಿರ್ಧರಿಸಲಾಗಿದೆ. ಅರ್ಹ ಮತದಾರರು ತಮ್ಮ



ಹೆಸರುಗಳನ್ನು ಅಂತಿಮ ಪಟ್ಟಿಗೆ ಸೇರಿಸಿಕೊಳ್ಳಲು ಅವಕಾಶ ನೀಡುವುದು ಇದರ ಪ್ರಮುಖ ಉದ್ದೇಶವಾಗಿದೆ.

ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಸಂಬಂಧಪಟ್ಟ ಮತದಾರರ ಮನೆಗಳಿಗೆ ಭೇಟಿ ನೀಡಿ, ಅವರು ಅದೇ ವಿಳಾಸದಲ್ಲಿ ವಾಸಿಸುತ್ತಿದ್ದಾರೆಯೇ ಎಂಬುದನ್ನು ಪರಿಶೀಲಿಸಬೇಕು. ಅಗತ್ಯವಿದ್ದಲ್ಲಿ ಕುಟುಂಬ ಸದಸ್ಯರು, ನೆರೆಹೊರೆಯವರು ಹಾಗೂ ಸ್ಥಳೀಯ ನಿವಾಸಿಗಳಿಂದ ಮಾಹಿತಿ ಸಂಗ್ರಹಿಸಬೇಕು ಎಂದು ಆಯೋಗ ಸೂಚಿಸಿದೆ.

ಕರಡು ಪಟ್ಟಿಯಿಂದ ಹೊರಗುಳಿದ ಮತದಾರರ ವಿವರಗಳನ್ನು ಆಯಾ ಮತಗಟ್ಟೆಗಳು, ಪಂಚಾಯಿತಿ ಕಚೇರಿಗಳು, ನಗರ ಸ್ಥಳೀಯ ಸಂಸ್ಥೆಗಳ ಕಚೇರಿಗಳು ಹಾಗೂ ಸಂಬಂಧಪಟ್ಟ ಚುನಾವಣಾಧಿಕಾರಿಗಳ ಕಚೇರಿಗಳ ಸೂಚನಾ ಫಲಕಗಳಲ್ಲಿ ಮತ್ತೊಮ್ಮೆ ಪ್ರದರ್ಶಿಸಬೇಕು. ಮುಖ್ಯ ಚುನಾವಣಾಧಿಕಾರಿಗಳ ಅಧಿಕೃತ ಜಾಲತಾಣಗಳಲ್ಲಿಯೂ ಈ ಮಾಹಿತಿಯನ್ನು ಲಭ್ಯವಾಗುವಂತೆ ಮಾಡಬೇಕು ಎಂದು ನಿರ್ದೇಶಿಸಲಾಗಿದೆ.

ಈ ಹಿಂದೆ ಗಣತಿ ನಮೂನೆ ಸಲ್ಲಿಸಲು ಸಾಧ್ಯವಾಗದಿದ್ದರೂ ಅದೇ ವಿಳಾಸದಲ್ಲಿ ವಾಸಿಸುತ್ತಿರುವ ಮತದಾರರು, ನಮೂನೆ ಸಲ್ಲಿಸಲಾಗದ ಕಾರಣವನ್ನು ವಿವರಿಸುವ ಹೇಳಿಕೆಯೊಂದಿಗೆ ಭರ್ತಿ ಮಾಡಿದ ಗಣತಿ ನಮೂನೆಯನ್ನು ಸಲ್ಲಿಸಬಹುದು. ಸಂಬಂಧಪಟ್ಟ ಮತದಾರರು ಅಥವಾ ಅವರ ಕುಟುಂಬ ಸದಸ್ಯರು ಚುನಾವಣಾ ನೋಂದಣಾಧಿಕಾರಿ, ಸಹಾಯಕ ಚುನಾವಣಾ ನೋಂದಣಾಧಿಕಾರಿ ಅಥವಾ ಬಿಎಲ್‌ಒಗಳಿಗೆ ನಮೂನೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. 2ನೇ ಪುಟಕ್ಕೆ

ನಕಲಿ ವೈದ್ಯರ ಕ್ಲಿನಿಕ್ ಸೀಜ್: ಕೆಪಿಎಂಇ ಕಾಯ್ದೆಯಡಿ ಕಠಿಣ ಕ್ರಮಕ್ಕೆ ಡಾ. ನಂದಿತಾ ಎಚ್ಚರಿಕೆ



ಲಿಂಗಸುಗೂರು, ನ.6: ಯಾವುದೇ ಮಾನ್ಯತೆ ಪಡೆದ ವೈದ್ಯಕೀಯ ಪದವಿ ಅಥವಾ ಅರ್ಹತೆ ಇಲ್ಲದೆ ಸಾರ್ವಜನಿಕರಿಗೆ ತಾವು ವೈದ್ಯರೆಂದು ಬಿಂಬಿಸಿಕೊಂಡು ಚಿಕಿತ್ಸೆ ನೀಡುತ್ತಿರುವ ನಕಲಿ ವೈದ್ಯರ ವಿರುದ್ಧ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ಕೆಪಿಎಂಇ) ಕಾಯ್ದೆಯಡಿ ಕಾನೂನು ಕ್ರಮ ಜರುಗಿಸಿ, ಎಫ್‌ಐಆರ್ ದಾಖಲಿಸಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಎಚ್ಚರಿಕೆ ನೀಡಿದ್ದಾರೆ.

ಲಿಂಗಸುಗೂರು ತಾಲೂಕಿನ ಆನೆಹೊಸೂರು ಗ್ರಾಮದಲ್ಲಿ ಇತ್ತೀಚೆಗೆ ವೈದ್ಯಕೀಯ ಪದವಿ ಪಡೆಯದೆ ಮನೆಯಲ್ಲಿಯೇ ಕ್ಲಿನಿಕ್ ನಡೆಸಿಕೊಂಡು ಸಾರ್ವಜನಿಕರಿಗೆ ಚಿಕಿತ್ಸೆ ನೀಡುತ್ತಿದ್ದ ಪ್ರಕರಣ ಪತ್ತೆಯಾಗಿದ್ದು, ಸಂಬಂಧಪಟ್ಟ ಕ್ಲಿನಿಕ್ ಅನ್ನು ಆರೋಗ್ಯ ಇಲಾಖೆ ಅಧಿಕಾರಿಗಳು ಸೀಜ್ ಮಾಡಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕೆಪಿಎಂಇ ಕಾಯ್ದೆಯಡಿ ಕಾನೂನು ಕ್ರಮ ಕೈಗೊಳ್ಳಲು ಜಿಲ್ಲಾ ಸಕ್ಷಮ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ವೈದ್ಯಕೀಯ ವಿದ್ಯಾರ್ಹತೆ ಇಲ್ಲದಿದ್ದರೂ ತಾವು ವೈದ್ಯರೆಂದು ಹೇಳಿಕೊಂಡು ಚಿಕಿತ್ಸೆ ನೀಡುತ್ತಿರುವ ಪ್ರಕರಣಗಳನ್ನು ಆರೋಗ್ಯ ಇಲಾಖೆ ಗಂಭೀರವಾಗಿ ಪರಿಗಣಿಸಿದೆ. ಇಂತಹ ಅನಧಿಕೃತ ಕ್ಲಿನಿಕ್‌ಗಳನ್ನು ಪತ್ತೆಹಚ್ಚಲು ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ನಿರಂತರ ತಪಾಸಣೆ ಹಾಗೂ ದಾಳಿ ನಡೆಸಲಾಗುವುದು. ಸಾರ್ವಜನಿಕರ ಆರೋಗ್ಯದೊಂದಿಗೆ ಚೆಲ್ಲಾಟವಾಡುವ ನಕಲಿ ವೈದ್ಯರ ವಿರುದ್ಧ ಕಾನೂನಿನ 2ನೇ ಪುಟಕ್ಕೆ

371(ಜೆ) ಸಮಿತಿ ಕಾರ್ಯವ್ಯಾಪ್ತಿ ವಿಸ್ತರಿಸಿ ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಿ: ಸಚಿವ ಡಾ. ಅಜಯ್ ಧರ್ಮಸಿಂಗ್

ಬೆಂಗಳೂರು, ನ.6: ಸಂವಿಧಾನದ ಅನುಚ್ಛೇದ 371(ಜೆ) ಅನುಷ್ಠಾನಕ್ಕೆ ಸಂಬಂಧಿಸಿದ ಸಚಿವ ಸಂಪುಟ ಉಪಸಮಿತಿಯ ಕಾರ್ಯವ್ಯಾಪ್ತಿಯನ್ನು ಕೇವಲ ಸರ್ಕಾರಿ ನೌಕರರ ಸೇವಾ ಜೇಷ್ಠತೆ, ನೇಮಕಾತಿ ಹಾಗೂ ಖಾಲಿ ಹುದ್ದೆಗಳ ವಿಚಾರಗಳಿಗೆ ಸೀಮಿತಗೊಳಿಸದೆ, ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದ ಎಲ್ಲ ವಿಷಯಗಳನ್ನೂ ಪರಿಶೀಲಿಸುವಂತೆ ವಿಸ್ತರಿಸಬೇಕು ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರ್ಮಸಿಂಗ್ ಒತ್ತಾಯಿಸಿದರು.

ಬೆಂಗಳೂರಿನ ವಿಕಾಸಸೌಧದಲ್ಲಿ ಶುಕ್ರವಾರ ನಡೆದ ಅನುಚ್ಛೇದ 371(ಜೆ) ಅನುಷ್ಠಾನಕ್ಕೆ ಸಂಬಂಧಿಸಿದ ಸಚಿವ ಸಂಪುಟ ಉಪಸಮಿತಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕಕ್ಕೆ ಸಂವಿಧಾನದಡಿ ವಿಶೇಷ ಸ್ಥಾನಮಾನ ಕಲ್ಪಿಸಿರುವ ಮೂಲ ಉದ್ದೇಶವೇ ಈ ಭಾಗದ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಉತ್ತೇಜನ ನೀಡುವುದಾಗಿದೆ. ಹೀಗಾಗಿ



ವಿಶೇಷ ಸ್ಥಾನಮಾನದ ಅನುಷ್ಠಾನವನ್ನು ಕೇವಲ ಉದ್ಯೋಗ ಮೀಸಲಾತಿ ಮತ್ತು ಸೇವಾ ವಿಷಯಗಳಿಗೆ ಸೀಮಿತಗೊಳಿಸುವುದು ಸರಿಯಲ್ಲ. ಶಿಕ್ಷಣ, ಆರೋಗ್ಯ, ಆಡಳಿತ, ಮೂಲಸೌಕರ್ಯ, ಸಿಬ್ಬಂದಿ ಹಂಚಿಕೆ ಹಾಗೂ ಇಲಾಖಾವಾರು ಅನುದಾನ ವಿತರಣೆಯಲ್ಲಿನ ಅಸಮಾನತೆಗಳನ್ನೂ ಸಮಗ್ರವಾಗಿ ಪರಿಶೀಲಿಸಬೇಕು ಎಂದು ಪ್ರತಿಪಾದಿಸಿದರು.

ಸರ್ಕಾರಿ ನೌಕರರ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ 2023, 2024 ಹಾಗೂ 2025ರಲ್ಲಿ ನಡೆದ 2ನೇ ಪುಟಕ್ಕೆ

ಕೂಲಿಕಾರರು, ಅಂಗನವಾಡಿ ಮಕ್ಕಳು ಹಾಗೂ ವಸತಿ ಶಾಲೆ ವಿದ್ಯಾರ್ಥಿಗಳಿಗೆ ತೊಂದರೆಯಾದರೆ ಅಧಿಕಾರಿಗಳ ವಿರುದ್ಧ ಕ್ರಮ: ಜಿ.ಪಂ. ಸಿಇಒ ಈಶ್ವರ ಕುಮಾರ್ ಕಾಂದೂ

ಲಿಂಗಸುಗೂರು: ತಾಲೂಕಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕೂಲಿಕಾರರು, ಅಂಗನವಾಡಿ ಕೇಂದ್ರಗಳ ಮಕ್ಕಳು ಹಾಗೂ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಮೂಲಸೌಕರ್ಯ ಮತ್ತು ಸೌಲಭ್ಯಗಳ ಒದಗಿಸುವಿಕೆಯಲ್ಲಿ ಯಾವುದೇ ರೀತಿಯ ತೊಂದರೆಯಾದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ರಾಯಚೂರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಎಚ್ಚರಿಕೆ ನೀಡಿದರು.

ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳು, ಉದ್ಯೋಗ ಖಾತರಿ ಯೋಜನೆಯ ಕಾಮಗಾರಿ ಸ್ಥಳಗಳು, ಅಂಗನವಾಡಿ ಕೇಂದ್ರ ಹಾಗೂ ವಸತಿ ಶಾಲೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ



ಸಂದರ್ಭದಲ್ಲಿ ಅವರು ಮಾತನಾಡಿದರು.

ಪ್ರಸ್ತುತ ಬರಗಾಲದ ಪರಿಸ್ಥಿತಿ ಇರುವುದರಿಂದ ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ನಿರಂತರ ಉದ್ಯೋಗಒದಗಿಸುವುದುಅತ್ಯಂತಅಗತ್ಯವಾಗಿದೆ. ಉದ್ಯೋಗ ಖಾತರಿ ಯೋಜನೆಯಡಿ ಲಭ್ಯವಿರುವ 125 ಮಾನವ ದಿನಗಳ ಉದ್ಯೋಗವನ್ನು ಇನ್ನೂ 50 ದಿನಗಳವರೆಗೆ ಹೆಚ್ಚಿಸುವಂತೆ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ಕೂಲಿಕಾರರಿಗೆ ಸಕಾಲದಲ್ಲಿ ಕೂಲಿ ಹಣ ಪಾವತಿಸುವುದರ ಜೊತೆಗೆ 2ನೇ ಪುಟಕ್ಕೆ

ಅರಕೇರಾದಲ್ಲಿ ನವೆಂಬರ್ 07 ರಂದು ಪ್ರಜಾಸೇವೆ ಆಂದೋಲನ ಸಭೆ



ರಾಯಚೂರು. ನವೆಂಬ. ೯6.(ಕರ್ನಾಟಕ ವಾರ್ತೆ):- ರಾಜ್ಯದ ಜನತೆಯ ಅಹವಾಲುಗಳನ್ನು ಆಲಿಸಿ ಮನೆ ಬಾಗಿಲಿನಲ್ಲಿಯೇ ಸಮಸ್ಯೆಗಳಿಗೆ ಪರಿಹಾರ ನೀಡುವ ಉದ್ದೇಶದಿಂದ, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಅಜಯ್ ಧರ್ಮ್ಸಿಂಗ್ ರವರ ಅಧ್ಯಕ್ಷತೆಯಲ್ಲಿ ಹಾಗೂ ವಿಧಾನಸಭಾ ಕ್ಷೇತ್ರದ ಶಾಸಕರ ನೇತೃತ್ವದಲ್ಲಿ 'ಪ್ರಜಾಸೇವೆ ಆಂದೋಲನ ಸಭೆ'ಯನ್ನು ಆಯೋಜಿಸಲಾಗಿದೆ.

ಈ ಸಭೆಯು 07.ನವೆಂಬ.ರ 2026ರ (1ನೇ ಶನಿವಾರ) ಬೆಳಿಗ್ಗೆ 10:00 ಗಂಟೆಗೆ ಅರಕೇರಾದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ನಡೆಯಲಿದೆ.

ಸಾರ್ವಜನಿಕರು ಈ ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ಅಹವಾಲುಗಳನ್ನು ಸಲ್ಲಿಸುವುದರ ಜೊತೆಗೆ ಸರ್ಕಾರದ ವಿವಿಧ ಯೋಜನೆಗಳ ಸವಲತ್ತು ಪಡೆಯಲು ಅರ್ಜಿ ಸಲ್ಲಿಸಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವತೆ ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಇತರೆ ಜಿಲ್ಲೆಗಳ ಅಭ್ಯರ್ಥಿಗಳೊಂದಿಗೆ ಪೈಪೋಟಿ ನಡೆಸಿ ಯಶಸ್ಸು ಸಾಧಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ರಾಯಚೂರು, ನ.6: ರಾಯಚೂರು ಜಿಲ್ಲೆಯ ಯುವಕ-ಯುವತಿಯರು ಕೇವಲ ಜಿಲ್ಲೆಯೊಳಗೆ ಮಾತ್ರ ಸ್ಪರ್ಧಿಸುವುದಕ್ಕೆ ಸೀಮಿತವಾಗದೆ, ಇತರೆ ಜಿಲ್ಲೆಗಳ ಅಭ್ಯರ್ಥಿಗಳೊಂದಿಗೆ ಸಮರ್ಥವಾಗಿ ಪೈಪೋಟಿ ನಡೆಸಿ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಬೇಕು. ಆ ಮೂಲಕ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುವುದರ ಜೊತೆಗೆ ಜಿಲ್ಲೆಯ ಅಭಿವೃದ್ಧಿಗೂ ಕೊಡುಗೆ ನೀಡಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಕರೆ ನೀಡಿದರು.

ನಗರದ ಜಿಲ್ಲಾ ಕೇಂದ್ರ ಗ್ರಂಥಾಲಯದ ಆವರಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ರಾಯಚೂರು ಮಹಾನಗರ ಪಾಲಿಕೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ಪೂರ್ವಸಿದ್ಧತಾ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯನ್ನು



ಮಹತ್ವಾಕಾಂಕ್ಷಿ ಜಿಲ್ಲೆ ಎಂದು ಗುರುತಿಸಲಾಗಿದೆ. ಜಿಲ್ಲೆ ಯಾವ ಕಾರಣಗಳಿಂದ ಹಿಂದುಳಿದಿದೆ ಎಂಬುದನ್ನು ಇಲ್ಲಿಯೇ ಹುಟ್ಟಿ ಬೆಳೆದ ಯುವಜನರು ಚೆನ್ನಾಗಿ ಅರಿತಿದ್ದಾರೆ. ಜಿಲ್ಲೆಯ ಅಭಿವೃದ್ಧಿ ಕೇವಲ ಸರ್ಕಾರದ ಯೋಜನೆಗಳು, ಅನುದಾನ ಹಾಗೂ ಮೂಲಸೌಕರ್ಯಗಳ ಅಭಿವೃದ್ಧಿಯಿಂದ ಮಾತ್ರ ಸಾಧ್ಯವಿಲ್ಲ. ಇಲ್ಲಿನ ಯುವಜನರು ಉತ್ತಮ ಶಿಕ್ಷಣ ಪಡೆದು ಉದ್ಯೋಗಸ್ಥರಾಗಬೇಕು. ಆರ್ಥಿಕವಾಗಿ ಸ್ವಾವಲಂಬಿಗಳಾಗಿ ಸಮಾಜದ ಅಭಿವೃದ್ಧಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಹೇಳಿದರು.

ರಸ್ತೆಗಳ ನಿರ್ಮಾಣ, ಶೌಚಾಲಯಗಳ ವ್ಯವಸ್ಥೆ, ಮೂಲಸೌಕರ್ಯಗಳ ಒದಗಿಸುವಿಕೆ ಹಾಗೂ ಸರ್ಕಾರಿ ಯೋಜನೆಗಳ ಅನುಷ್ಠಾನ ಅಭಿವೃದ್ಧಿಯ ಪ್ರಮುಖ ಭಾಗಗಳಾಗಿವೆ. ಆದರೆ ಇವುಗಳ ಜೊತೆಗೆ ಯುವಜನರು ವಿವಿಧ ಕ್ಷೇತ್ರಗಳಲ್ಲಿ ಉದ್ಯೋಗಗಳನ್ನು ಪಡೆದುಕೊಳ್ಳಬೇಕು. ಉದ್ಯಮಗಳನ್ನು ಸ್ಥಾಪಿಸಿ ಇತರರಿಗೂ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಮಟ್ಟಕ್ಕೆ ಬೆಳೆಯಬೇಕು. ಪ್ರತಿಯೊಬ್ಬರ ಆದಾಯ 2ನೇ ಪುಟಕ್ಕೆ

ಸಿಡಿಲು ಬಡಿದು ರೈತ ಪ್ರಭಣ್ಣ ಸಾವು: ಕುಟುಂಬಕ್ಕೆ ₹5 ಲಕ್ಷ ಪರಿಹಾರ ನೀಡಿ ಸಾಂತ್ವನ ಹೇಳಿದ ಶಾಸಕ ದದ್ದಲ್

ರಾಯಚೂರು: ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಹರನಹಳ್ಳಿ ಗ್ರಾಮದಲ್ಲಿ ಕೃಷಿ ಕೆಲಸದಲ್ಲಿ ನಿರತರಾಗಿದ್ದ ವೇಳೆ ಸಿಡಿಲು ಬಡಿದು ಮೃತಪಟ್ಟ ರೈತ ಪ್ರಭಣ್ಣ ಅವರ ಕುಟುಂಬಕ್ಕೆ ಶಾಸಕ ಬಸನಗೌಡ ದದ್ದಲ್ ಸರ್ಕಾರದ ವತಿಯಿಂದ ₹5 ಲಕ್ಷ ಪರಿಹಾರ ವಿತರಿಸಿ, ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು.

ಇತ್ತೀಚೆಗೆ ಹರನಹಳ್ಳಿ ಗ್ರಾಮದ ಕೃಷಿ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ಸಿಡಿಲು ಬಡಿದ ಪರಿಣಾಮ ಪ್ರಭಣ್ಣ ಮೃತಪಟ್ಟಿದ್ದು, ಘಟನೆಯಲ್ಲಿ ಮತ್ತಿತರ ನಾಲ್ವರು ಗಾಯಗೊಂಡಿದ್ದರು. ಈ ದುರ್ಘಟನೆಯಿಂದ ರೈತ ಕುಟುಂಬ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಶಾಸಕ ಬಸನಗೌಡ ದದ್ದಲ್ ಮೃತರ ನಿವಾಸಕ್ಕೆ ಭೇಟಿ ನೀಡಿ ಕುಟುಂಬದವರೊಂದಿಗೆ ಮಾತುಕತೆ ನಡೆಸಿದರು.

ಅಕಾಲಿಕವಾಗಿ ಕುಟುಂಬದ



ಆಧಾರಸ್ತಂಭವನ್ನು ಕಳೆದುಕೊಂಡಿರುವ ಸದಸ್ಯರಿಗೆ ಧೈರ್ಯ ತುಂಬಿದ ಶಾಸಕರು, ಸರ್ಕಾರದ ವತಿಯಿಂದ ಮಂಜೂರಾದ ₹5 ಲಕ್ಷ ಪರಿಹಾರ ಧನವನ್ನು ಹಸ್ತಾಂತರಿಸಿದರು. ಇದೇ ವೇಳೆ ಘಟನೆಯ ಕುರಿತು ಕುಟುಂಬದವರಿಂದ ಮಾಹಿತಿ ಪಡೆದು, ಸಿಡಿಲು ಬಡಿತದಿಂದ ಗಾಯಗೊಂಡಿರುವ ನಾಲ್ವರ ಆರೋಗ್ಯದ ಬಗ್ಗೆಯೂ ವಿಚಾರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಬಸನಗೌಡ ದದ್ದಲ್, ಕೃಷಿಯನ್ನೇ ಜೀವನಾಧಾರವಾಗಿಸಿಕೊಂಡಿರುವ ಕುಟುಂಬಕ್ಕೆ ಪ್ರಕೃತಿ ವಿಕೋಪದಿಂದ ಸಂಭವಿಸಿರುವ ಸಾವು ತೀವ್ರ ಆಘಾತ ಉಂಟುಮಾಡಿದೆ. ದುಡಿಯುವ ವ್ಯಕ್ತಿಯನ್ನು ಕಳೆದುಕೊಂಡ ಕುಟುಂಬದ ನೋವನ್ನು ಹಣದಿಂದ ಸರಿದೂಗಿಸಲು ಸಾಧ್ಯವಿಲ್ಲ. ಆದರೂ ಸಂಕಷ್ಟದಲ್ಲಿರುವ ಕುಟುಂಬಕ್ಕೆ ಆರ್ಥಿಕ ನೆರವು ಒದಗಿಸುವ ಉದ್ದೇಶದಿಂದ ಸರ್ಕಾರ 2ನೇ ಪುಟಕ್ಕೆ

ತಿಡಿಗೋಳ ಜಾತ್ರೆಯ ಸಣ್ಣ ವಿವಾದಕ್ಕೆ ಕೋಮು ಬಣ್ಣ ನೀಡಲಾಗುತ್ತಿದೆ: ಅಮರೇಶ ಗಚ್ಚಿನಮನೆ ಆರೋಪ

ರಾಯಚೂರು: ತಿಡಿಗೋಳ ಗ್ರಾಮದ ಆಂಜನೇಯ ಸ್ವಾಮಿ ಜಾತ್ರೆಯ ಸಂದರ್ಭದಲ್ಲಿ ಯುವಕರ ನಡುವೆ ನಡೆದ ಸಣ್ಣಪುಟ್ಟ ವಾಗ್ವಾದವನ್ನು ಅನಗತ್ಯವಾಗಿ ದೊಡ್ಡ ವಿವಾದವನ್ನಾಗಿ ಬಿಂಬಿಸಿ, ಗ್ರಾಮದ ಶಾಂತಿ ಮತ್ತು ಸೌಹಾರ್ದತೆಗೆ ಧಕ್ಕೆ ತರುವ ರೀತಿಯಲ್ಲಿ ಅಪಪ್ರಚಾರ ಮಾಡಲಾಗುತ್ತಿದೆ ಎಂದು ಗ್ರಾಮದ ಮುಖಂಡ ಅಮರೇಶ ಗಚ್ಚಿನಮನೆ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಿಡಿಗೋಳ ಗ್ರಾಮದಲ್ಲಿ ವಿವಿಧ ಸಮುದಾಯಗಳ ಜನರು ಹಲವು ವರ್ಷಗಳಿಂದ ಪರಸ್ಪರ ಸಹಕಾರ, ವಿಶ್ವಾಸ ಹಾಗೂ ಸಾಮರಸ್ಯದಿಂದ ಜೀವನ ನಡೆಸುತ್ತಿದ್ದಾರೆ. ಗ್ರಾಮದಲ್ಲಿ ಯಾವುದೇ ಸಮುದಾಯದವರನ್ನು ಸಾಮಾಜಿಕವಾಗಿ ಬಹಿಷ್ಕರಿಸಿದ ಘಟನೆ ನಡೆದಿಲ್ಲ. ಆದರೆ ಜಾತ್ರೆಯ ಸಂದರ್ಭದಲ್ಲಿ ಉಂಟಾದ ಸಣ್ಣ ಭಿನ್ನಾಭಿಪ್ರಾಯಕ್ಕೆ ಕೋಮು ಸ್ವರೂಪ ನೀಡುವ ಮೂಲಕ ಗ್ರಾಮಸ್ಥರ ನಡುವೆ ಅನಗತ್ಯ ಗೊಂದಲ ಸೃಷ್ಟಿಸಲಾಗುತ್ತಿದೆ ಎಂದು ದೂರಿದರು.

ಗ್ರಾಮದಲ್ಲಿ ಆಂಜನೇಯ ಸ್ವಾಮಿಯ ಜಾತ್ರಾ



ಮಹೋತ್ಸವವನ್ನು ಮೂರು ದಿನಗಳ ಕಾಲ ಸಾಂಪ್ರದಾಯಿಕವಾಗಿ ಆಚರಿಸಲಾಗುತ್ತದೆ. ಜಾತಿ, ಸಮುದಾಯಗಳಭೇದವಿಲ್ಲದೆಎಲ್ಲರೂಉತ್ಸವದಲ್ಲಿ ಪಾಲ್ಗೊಳ್ಳುತ್ತಾರೆ. ಜಾತ್ರೆಯ ಅಂಗವಾಗಿ ನಡೆಯುವ ಪ್ರಸಾದ ವಿತರಣೆಯ ಸಂದರ್ಭದಲ್ಲಿಯೂ ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗುತ್ತದೆಯೇ ಹೊರತು ಯಾವುದೇ ಸಮುದಾಯದ ಆಧಾರದಲ್ಲಿ ತಾರತಮ್ಯ ಮಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಹಲವು ಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ರಥೋತ್ಸವವು ವಿಜೃಂಭಣೆಯಿಂದ ನೆರವೇರಿದೆ. ರಥೋತ್ಸವ ಮುಕ್ತಾಯಗೊಂಡ ನಂತರ ಎರಡು ಸಮುದಾಯಗಳ ಯುವಕರ ನಡುವೆ ಡ್ರಮ್ ಬಾರಿಸುವ ವಿಚಾರಕ್ಕೆ ಸಂಬಂಧಿಸಿದಂತೆ ಮಾತಿನ ಚಕಮಕಿ ಉಂಟಾಗಿತ್ತು. ಈ ಸಂದರ್ಭದಲ್ಲಿ ಯುವಕರ ನಡುವೆ ಪರಸ್ಪರ ತಳ್ಳಾಟ ನಡೆದಿದ್ದು, ಗ್ರಾಮದ ಹಿರಿಯರು ಹಾಗೂ ಸಮುದಾಯದ ಮುಖಂಡರು ಮಧ್ಯಪ್ರವೇಶಿಸಿ ಪರಿಸ್ಥಿತಿಯನ್ನು ತಿಳಿಗೊಳಿಸಿದ್ದಾರೆ. ಘಟನೆಯಲ್ಲಿ ಯಾರಿಗೂ ಗಾಯಗಳಾಗಿಲ್ಲ ಎಂದು ಅವರು ತಿಳಿಸಿದರು.

ಯುವಕರ ನಡುವಿನ ವೈಯಕ್ತಿಕ ಭಿನ್ನಾಭಿಪ್ರಾಯವನ್ನು ಇಡೀ ಗ್ರಾಮದ ಸಮಸ್ಯೆಯಂತೆ ಬಿಂಬಿಸುವುದು ಸರಿಯಲ್ಲ. ಸಣ್ಣ ಘಟನೆಯನ್ನು ಆಧಾರವಾಗಿಟ್ಟುಕೊಂಡು ಸಮುದಾಯಗಳ ನಡುವೆ ವೈಮನಸ್ಸು ಉಂಟುಮಾಡುವ ಪ್ರಯತ್ನಗಳು 2ನೇ ಪುಟಕ್ಕೆ

ಪ್ರಿಯಾಂಕ್ ಖರ್ಗೆ ಕ್ಷಮೆಯಾಚನೆಗೆ ಆಗ್ರಹಿಸಿ ಜೆಡಿಎಸ್ ಪ್ರತಿಭಟನೆ

ರಾಯಚೂರು: ಗ್ರಾಮೀಣ ಜನತೆಯನ್ನು ಅವಮಾನಿಸುವ ರೀತಿಯಲ್ಲಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಬೇಷರತ್ ಕ್ಷಮೆಯಾಚಿಸಬೇಕು. ಜೊತೆಗೆ ರಾಜ್ಯ ಸರ್ಕಾರ ಬಸ್ ಪ್ರಯಾಣ ದರ ಹಾಗೂ ಹಾಲು, ಮೊಸರಿನ ಬೆಲೆ ಏರಿಕೆಯನ್ನು ತಕ್ಷಣ ಹಿಂಪಡೆಯಬೇಕು ಎಂದು ಒತ್ತಾಯಿಸಿ ಜಿಲ್ಲಾ ಜನತಾದಳ (ಜಾತ್ಯತೀತ) ಘಟಕದ ಕಾರ್ಯಕರ್ತರು ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ನಾವು ಹಳ್ಳಿ ಗುಗ್ಗುಗಳು ಏನಿವಾಗ? ಎಂಬ ಘೋಷಣೆಯೊಂದಿಗೆಪ್ರತಿಭಟನೆನಡೆಸಿದಜೆಡಿಎಸ್ ಮುಖಂಡರು ಹಾಗೂ ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ರಾಜ್ಯದ ಬಹುಸಂಖ್ಯಾತ ಜನರು ಗ್ರಾಮೀಣ ಪ್ರದೇಶಗಳಲ್ಲಿ ನೆಲೆಸಿದ್ದು, ಕೃಷಿ ಹಾಗೂ ಗ್ರಾಮೀಣ ಆರ್ಥಿಕತೆಯೊಂದಿಗೆ ನಿಕಟ ಸಂಬಂಧ ಹೊಂದಿದ್ದಾರೆ. ಇಂತಹ ಜನರನ್ನು ಗೌರವಿಸುವುದು ಜನಪ್ರತಿನಿಧಿಗಳ ಕರ್ತವ್ಯವಾಗಿದೆ. ಆದರೆ ಕೇಂದ್ರ



ಸಚಿವ ಎಚ್.ಡಿ. ಕುಮಾರಸ್ವಾಮಿ ಅವರನ್ನು ಟೀಕಿಸುವ ಸಂದರ್ಭದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಗುಗ್ಗು ಹಾಗೂ ವಿಲೇಜ್ ಈಡಿಯಟ್ಸ್ ಎಂಬ ಪದಗಳನ್ನು ಬಳಸುವ ಮೂಲಕ ಗ್ರಾಮೀಣ ಜನರ ಸ್ವಾಭಿಮಾನಕ್ಕೆ ಧಕ್ಕೆ ತಂದಿದ್ದಾರೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಜವಾಬ್ದಾರಿಯುತ ಸಚಿವ ಸ್ಥಾನದಲ್ಲಿರುವವರು ಸಾರ್ವಜನಿಕವಾಗಿ ಮಾತನಾಡುವಾಗ ಸಂಯಮ ಹಾಗೂ ಗೌರವ ಕಾಪಾಡಿಕೊಳ್ಳಬೇಕು. ಗ್ರಾಮೀಣ ಜನರ ಭಾವನೆಗಳಿಗೆ ನೋವುಂಟುಮಾಡುವ ಹೇಳಿಕೆಗಳನ್ನು ನೀಡುವುದು ಸರಿಯಲ್ಲ. ಈ ಹಿನ್ನೆಲೆಯಲ್ಲಿ ಪ್ರಿಯಾಂಕ್ ಖರ್ಗೆ ಅವರು ಯಾವುದೇ ಷರತ್ತು ವಿಧಿಸದೆ ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು ಎಂದು ಆಗ್ರಹಿಸಿದರು.

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಗ್ರಾಮೀಣ ಹಿನ್ನೆಲೆಯಿಂದ ರಾಜಕೀಯ ಕ್ಷೇತ್ರಕ್ಕೆ ಬಂದ ನಾಯಕರಾಗಿದ್ದು, ರೈತರ ಹಿತಾಸಕ್ತಿ ಕಾಪಾಡಲು ಹಲವು ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ರೈತರ ಸಾಲಮನ್ನಾ, ನೀರಾವರಿ ಅಭಿವೃದ್ಧಿ ಹಾಗೂ ಗ್ರಾಮೀಣ ಪ್ರದೇಶಗಳ ಪ್ರಗತಿಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಇಂತಹ ನಾಯಕರನ್ನು ಅವಹೇಳನ ಮಾಡುವ ಮೂಲಕ ಗ್ರಾಮೀಣ ಸಮುದಾಯದ ಗೌರವಕ್ಕೂ ಧಕ್ಕೆ ತರಲಾಗಿದೆ ಎಂದು ಮನವಿಯಲ್ಲಿ ದೂರಿದರು.

ರಾಜ್ಯ ಸರ್ಕಾರದ ಬೆಲೆ ಏರಿಕೆ ನೀತಿಗಳಿಂದ ಸಾಮಾನ್ಯ ಜನರ ಆರ್ಥಿಕ ಹೊರೆ ಹೆಚ್ಚಾಗಿದೆ. ಬಸ್ ಪ್ರಯಾಣ ದರದ ಜೊತೆಗೆ ಹಾಲು 2ನೇ ಪುಟಕ್ಕೆ

ಪಂಚರ್ ಅಂಗಡಿ ಮಾಲೀಕ ನರಸಿಂಗರಾವ್ ಸರೋದೆಗೆ ರಾಜ್ಯಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ



ದೇವದುರ್ಗ: ಪಂಚರ್ ಅಂಗಡಿ ನಡೆಸುತ್ತಲೇ ಕಾಯಕವೇ ಕೈಲಾಸ ಎಂಬ ಬಸವಣ್ಣನವರ ತತ್ವವನ್ನು ಬದುಕಿನಲ್ಲಿ ಅಳವಡಿಸಿಕೊಂಡು, ಮಗನನ್ನು ವೈದ್ಯಕೀಯ ಶಿಕ್ಷಣಕ್ಕೆ ಸೇರಿಸಿರುವ ಪಟ್ಟಣದ ಭಗತ್ ಸಿಂಗ್ ಓಣಿಯ ನರಸಿಂಗರಾವ್ ಉತ್ತಪ್ಪ ಸರೋದೆ ಅವರ ಪರಿಶ್ರಮವನ್ನು





ಗುರುತಿಸಿ ರಾಯಚೂರಿನ ಕಲಾ ಸಂಕುಲ ಸಂಸ್ಥೆಯು ರಾಜ್ಯಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ನವೆಂಬರ್ 8ರಂದು ರಾಯಚೂರಿನ ರಂಗಮಂದಿರದಲ್ಲಿ ನಡೆಯಲಿರುವ ದೇಸೀ ಸಂಭ್ರಮ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು.

1983ರ ಮೇ 28ರಂದು ಕಿರಾಣಿ ವ್ಯಾಪಾರಿ ಉತ್ತಪ್ಪ ಸರೋದೆ ಹಾಗೂ ಕಲಾವತಿ ದಂಪತಿಯ ಒಂಬತ್ತು ಮಕ್ಕಳ ಕುಟುಂಬದಲ್ಲಿ ನಾಲ್ಕನೇ ಮಗನಾಗಿ ಜನಿಸಿದ ನರಸಿಂಗರಾವ್, ಬಡತನದ ನಡುವೆಯೇ ಬಿ.ಎ. ಪದವಿ ಪೂರ್ಣಗೊಳಿಸಿದರು. ಆರ್ಥಿಕ ಸಮಸ್ಯೆಯಿಂದ ಉನ್ನತ ಶಿಕ್ಷಣ ಮುಂದುವರಿಸಲಾಗದಿದ್ದರೂ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಸಂಕಲ್ಪ ಮಾಡಿದರು.

1999ರಲ್ಲಿ ಅಣ್ಣನ ಪಂಚರ್ ಅಂಗಡಿಯಲ್ಲಿ ಕೆಲಸ ಆರಂಭಿಸಿದ ಅವರು, ಅನೇಕ ಸಂಕಷ್ಟಗಳನ್ನು ಎದುರಿಸಿ ಸ್ವಂತ ಚಂದ್ರು ಪಂಚರ್ ಅಂಗಡಿ ಸ್ಥಾಪಿಸಿದರು. ಹಗಲಿರುಳು ದುಡಿದು ಸ್ವಾವಲಂಬಿ ಬದುಕು ಕಟ್ಟಿಕೊಂಡ ಅವರು, ಕಾಯಕನಿಷ್ಠೆಯಿಂದ ಕುಟುಂಬವನ್ನು ಮುನ್ನಡೆಸುತ್ತಿದ್ದಾರೆ.

2008ರಲ್ಲಿ ವಸಂತ ಅವರೊಂದಿಗೆ ವಿವಾಹವಾದ ನರಸಿಂಗರಾವ್ ಅವರಿಗೆ ಅಕ್ಷಯ ಹಾಗೂ ಅಕ್ಷರಾ ಎಂಬ ಇಬ್ಬರು ಮಕ್ಕಳಿದ್ದಾರೆ. ಪುತ್ರ ಅಕ್ಷಯ ನರಸಿಂಗರಾವ್ ಸರೋದೆ ಕೊಪ್ಪಳದ ಕಿಮ್ಸ್‌ನಲ್ಲಿ ಎಂಬಿಬಿಎಸ್ ಸೀಟು ಪಡೆದಿದ್ದು, ಪುತ್ರಿ ಅಕ್ಷರಾ ಒಂಬತ್ತನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದಾಳೆ.

ಸಹೋದರರಾದ ವೆಂಕಟೇಶ, ಚಂದ್ರಕಾಂತ, ಮಹಾಂತೇಶ, ಲೋಹಿತ್ ಹಾಗೂ ಕುಟುಂಬದ ಇತರ ಸದಸ್ಯರ ಸಹಕಾರವೂ ಇವರ ಸಾಧನೆಗೆ ಬೆಂಬಲವಾಗಿದೆ.

ಪಂಚರ್ ಅಂಗಡಿಯ ದುಡಿಮೆಯಿಂದಲೇ ಮಗನ ವೈದ್ಯಕೀಯ ಶಿಕ್ಷಣದ ಕನಸನ್ನು ನನಸಾಗಿಸುತ್ತಿರುವ ನರಸಿಂಗರಾವ್ ಅವರ ಕಾಯಕನಿಷ್ಠೆ, ಕುಟುಂಬದ ಮೇಲಿನ ಕಾಳಜಿ ಹಾಗೂ ಮಕ್ಕಳ ಶಿಕ್ಷಣಕ್ಕಾಗಿ ತೋರಿದ ತ್ಯಾಗವನ್ನು ಗುರುತಿಸಿ ಕಲಾ ಸಂಕುಲ ಸಂಸ್ಥೆ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ಸಾಮಾನ್ಯ ವೃತ್ತಿಯಲ್ಲಿಯೂ ಅಸಾಮಾನ್ಯ ಸಾಧನೆ ಮಾಡಬಹುದೆಂಬುದಕ್ಕೆ ನರಸಿಂಗರಾವ್ ಅವರ ಬದುಕು ಮಾದರಿಯಾಗಿದ್ದು, ಅವರ ಸಾಧನೆಗೆ ತಾಲೂಕಿನಾದ್ಯಂತ ಮೆಚ್ಚುಗೆ ವ್ಯಕ್ತವಾಗಿದೆ.

ಅಮೃತ ವಾಣಿ

ಜ್ಞಾನವೆಂದರೆ ಕೇವಲ ತಿಳಿದುಕೊಳ್ಳುವುದಲ್ಲ ಅಳವಡಿಸಿಕೊಳ್ಳುವುದು.



ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಇತರೆ ಜಿಲ್ಲೆಗಳ ಅಭ್ಯರ್ಥಿಗಳೊಂದಿಗೆ ಪೈಪೋಟಿ ನಡೆಸಿ ಯಶಸ್ಸು ಸಾಧಿಸಿ: ಜಿಲ್ಲಾಧಿಕಾರಿ ಪೂವಿತಾ ಎಸ್.

ಮತ್ತು ಉದ್ಯೋಗದ ಮೂಲಕ ಜಿಲ್ಲೆಯ ಆರ್ಥಿಕ ಚಟುವಟಿಕೆಗಳು ವೃದ್ಧಿಯಾಗಬೇಕು. ಪ್ರತಿಯೊಬ್ಬರೂ ತಮ್ಮದೇ ಆದ ಕೊಡುಗೆ ನೀಡಿದಾಗ ಮಾತ್ರ ಜಿಲ್ಲೆ ವೇಗವಾಗಿ ಅಭಿವೃದ್ಧಿ ಹೊಂದಲು ಸಾಧ್ಯ ಎಂದರು.

ಕಳೆದ ಎರಡು ವರ್ಷಗಳಿಂದ ಜಿಲ್ಲೆಯಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಮುಂದಿನ ವರ್ಷಗಳಲ್ಲಿ ಇಂತಹ ಕಾರ್ಯಕ್ರಮಗಳನ್ನು ಇನ್ನಷ್ಟು ವಿಸ್ತರಿಸುವ ಉದ್ದೇಶವಿದೆ. ಪ್ರಸ್ತುತ ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇಮಕಾತಿ ಪ್ರಕ್ರಿಯೆಗಳು ನಡೆಯುತ್ತಿವೆ. ಕೆಲವರು ಹೊಸದಾಗಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ಆರಂಭಿಸಿದ್ದರೆ, ಇನ್ನೂ ಕೆಲವರು ಹಲವು ವರ್ಷಗಳಿಂದ ನಿರಂತರ ಪ್ರಯತ್ನ ನಡೆಸುತ್ತಿದ್ದಾರೆ. ಎಲ್ಲ ಅಭ್ಯರ್ಥಿಗಳಿಗೂ ಸೂಕ್ತ ಮಾರ್ಗದರ್ಶನ ಹಾಗೂ ತರಬೇತಿಯ ಅಗತ್ಯವಿದೆ ಎಂದು ತಿಳಿಸಿದರು.

ತರಬೇತಿ ಕಾರ್ಯಕ್ರಮಗಳ ಮೂಲಕ ಯಾವ ವಿಷಯಗಳನ್ನು ಓದಬೇಕು, ಹೇಗೆ ಅಧ್ಯಯನ ಮಾಡಬೇಕು ಹಾಗೂ ಪರೀಕ್ಷೆಗಳಿಗೆ ಯಾವ ರೀತಿಯಲ್ಲಿ ಸಿದ್ಧತೆ ನಡೆಸಬೇಕು ಎಂಬುದನ್ನು ತಿಳಿಸಿಕೊಡಬಹುದು. ಆದರೆ ನಿಜವಾದ ಪರಿಶ್ರಮ ಅಭ್ಯರ್ಥಿಗಳಿಂದಲೇ ಬರಬೇಕು. ಬೇರೆಯವರು ನೀಡುವ ಪ್ರೇರಣೆ ತಾತ್ಕಾಲಿಕವಾಗಿರುತ್ತದೆ. ಪ್ರತಿಯೊಬ್ಬರಲ್ಲಿಯೂ ಸ್ವಯಂ ಪ್ರೇರಣೆ, ಕಠಿಣ ಪರಿಶ್ರಮ, ಆತ್ಮವಿಶ್ವಾಸ ಹಾಗೂ ಮತ್ತೆ ಮತ್ತೆ ಪ್ರಯತ್ನಿಸುವ ಮನೋಭಾವ ಇರಬೇಕು. ಸಾಧಿಸಬೇಕೆಂಬ ದೃಢಸಂಕಲ್ಪವಿಲ್ಲದಿದ್ದರೆ ಹೊರಗಿನ ಪ್ರೇರಣೆ ಒಂದೆರಡು ದಿನಗಳಿಗೆ ಮಾತ್ರ ಸೀಮಿತವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ತಮ್ಮ ಯುಪಿಎಸ್‌ಸಿ ಪರೀಕ್ಷೆಯ ಸಿದ್ಧತೆಯ ಅನುಭವವನ್ನು ಹಂಚಿಕೊಂಡ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು, ಮೊದಲ ಪ್ರಯತ್ನದಲ್ಲಿ ಪ್ರಿಲಿಮ್ಸ್ ಪರೀಕ್ಷೆಯನ್ನೂ ಉತ್ತೀರ್ಣರಾಗಲು ಸಾಧ್ಯವಾಗಿರಲಿಲ್ಲ. ಉದ್ಯೋಗವನ್ನು ತೊರೆದು ಪರೀಕ್ಷೆಗೆ ಸಿದ್ಧತೆ ಆರಂಭಿಸಿದಾಗ ಕೋಚಿಂಗ್ ಕೇಂದ್ರದಲ್ಲಿ ನಾಲ್ಕೈದು ವರ್ಷಗಳಿಂದ ಅಧ್ಯಯನ ನಡೆಸುತ್ತಿದ್ದ ಅಭ್ಯರ್ಥಿಗಳಿದ್ದರು. ಶಿಕ್ಷಕರು ಕೇಳುವ ಪ್ರಶ್ನೆಗಳಿಗೆ ಇತರರು ಸುಲಭವಾಗಿ ಉತ್ತರಿಸುತ್ತಿದ್ದರೆ, ಆರಂಭದಲ್ಲಿ ತಮಗೆ ಉತ್ತರಿಸಲು ಸಾಧ್ಯವಾಗುತ್ತಿರಲಿಲ್ಲ ಎಂದು ನೆನಪಿಸಿಕೊಂಡರು.

ಆ ಸಂದರ್ಭದಲ್ಲಿ ಉದ್ಯೋಗವನ್ನು ಬಿಟ್ಟು ಬಂದ ನಿರ್ಧಾರ ಸರಿಯೇ ಎಂಬ ಅನುಮಾನವೂ ಕಾಡಿತ್ತು. ಆದರೆ ತಮ್ಮ ಗುರಿಯನ್ನು ತಾವೇ ನಿರ್ಧರಿಸಿಕೊಂಡಿರುವುದರಿಂದ ಅದನ್ನು ಸಾಧಿಸಲೇಬೇಕೆಂಬ ದೃಢನಿಶ್ಚಯ ಮಾಡಿದ್ದೆ. ಮೊದಲ ವರ್ಷ ಪರೀಕ್ಷೆಯಲ್ಲಿ ಯಶಸ್ಸು ಸಿಗಲಿಲ್ಲ. ಎರಡನೇ ವರ್ಷ ಕುಟುಂಬದವರು ಮದುವೆಯ ಬಗ್ಗೆ ಮಾತನಾಡಲು ಆರಂಭಿಸಿದರು. ಆದರೆ ಉದ್ಯೋಗ ಪಡೆದು ಗುರಿ ಸಾಧಿಸುವವರೆಗೆ ಮದುವೆಯಾಗುವುದಿಲ್ಲ ಎಂಬ ನಿರ್ಧಾರಕ್ಕೆ ಬದ್ಧಳಾಗಿದ್ದೆ ಎಂದು ಹೇಳಿದರು.

ಮೂರನೇ ವರ್ಷವೂ ಪರೀಕ್ಷೆಗೆ ಸಿದ್ಧತೆ ಮುಂದುವರಿಸಿದೆ. ನಾಲ್ಕನೇ ವರ್ಷದಲ್ಲಿ ಕುಟುಂಬದವರು ಯಾವುದಾದರೂ ಉದ್ಯೋಗ ಪಡೆದುಕೊಳ್ಳುವಂತೆ ಸಲಹೆ ನೀಡಿದರೂ ಐಎಎಸ್ ಅಧಿಕಾರಿಯಾಗಬೇಕೆಂಬ ಗುರಿಯನ್ನು ಬಿಟ್ಟುಕೊಡಲಿಲ್ಲ. ಅಂತಿಮವಾಗಿ ಸತತ ನಾಲ್ಕನೇ ಪ್ರಯತ್ನದಲ್ಲಿ, ನಾಲ್ಕು ವರ್ಷಗಳ ನಿರಂತರ ಪರಿಶ್ರಮದ ಫಲವಾಗಿ ಯಶಸ್ಸು ದೊರೆಯಿತು ಎಂದು ತಮ್ಮ ಅನುಭವವನ್ನು ವಿವರಿಸಿದರು.

ಒಂದು ಕಾಲದಲ್ಲಿ ಹೆಣ್ಣುಮಕ್ಕಳು ಇಂತಹ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುವುದು, ಬೇರೆ ರಾಜ್ಯಗಳಿಗೆ ತೆರಳಿ ಅಧ್ಯಯನ ಮಾಡುವುದು ಸೂಕ್ತವಲ್ಲ ಎಂದು ಹೇಳುತ್ತಿದ್ದವರೇ ಇಂದು ತಮ್ಮ ಹೆಣ್ಣುಮಕ್ಕಳನ್ನು ಯುಪಿಎಸ್‌ಸಿ ಪರೀಕ್ಷೆಗೆ ಸಿದ್ಧತೆ ನಡೆಸುವಂತೆ ಪ್ರೋತ್ಸಾಹಿಸುತ್ತಿದ್ದಾರೆ. ತಮ್ಮ ಊರು ಹಾಗೂ ಸಮಾಜದ ಜನರು ಮಕ್ಕಳಿಗೆ ಮಾರ್ಗದರ್ಶನ ನೀಡುವಂತೆ ಕೇಳುತ್ತಿರುವುದು ಸಂತೋಷದ ಸಂಗತಿಯಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ನಿರುದ್ಯೋಗ ಸಮಸ್ಯೆ ಇರುವುದನ್ನು ಅಲ್ಲಗಳೆಯಲು ಸಾಧ್ಯವಿಲ್ಲ. ಆದರೆ ಒಬ್ಬ ಯುವಕ ಅಥವಾ ಯುವತಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸಿದರೆ, ಅವರನ್ನು ನೋಡಿ ಅದೇ ಗ್ರಾಮದ ಕನಿಷ್ಠ ಹತ್ತು ಯುವಜನರಾದರೂ ಕೆಪಿಎಸ್‌ಸಿ, ಯುಪಿಎಸ್‌ಸಿ ಸೇರಿದಂತೆ ವಿವಿಧ ಪರೀಕ್ಷೆಗಳಿಗೆ ಸಿದ್ಧತೆ ಆರಂಭಿಸಲು ಪ್ರೇರಣೆ ಪಡೆಯುತ್ತಾರೆ. ಆದ್ದರಿಂದ ಅಭ್ಯರ್ಥಿಗಳು ಕೇವಲ ವೈಯಕ್ತಿಕ ಯಶಸ್ಸಿಗಾಗಿ ಅಧ್ಯಯನ ಮಾಡದೆ, ತಮ್ಮ ಕುಟುಂಬ, ಸಮಾಜ, ಗ್ರಾಮ ಹಾಗೂ ಇಡೀ ಜಿಲ್ಲೆಗೆ ಮಾದರಿಯಾಗುವ ಗುರಿ ಹೊಂದಬೇಕು ಎಂದು ಕರೆ ನೀಡಿದರು.

ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೋಹಪಾತ್ರ ಮಾತನಾಡಿ, ನಿಜವಾದ ಕನಸು ಮನುಷ್ಯನನ್ನು ನಿದ್ರಿಸಲು ಬಿಡುವುದಿಲ್ಲ. ಪ್ರತಿಯೊಬ್ಬ ಅಭ್ಯರ್ಥಿಯಲ್ಲಿಯೂ ಸಾಧಿಸುವ ಶಕ್ತಿ ಮತ್ತು ಸಾಮರ್ಥ್ಯವಿದೆ. ಈ ಉಚಿತ ತರಬೇತಿಯ ಸದುಪಯೋಗ ಪಡೆದುಕೊಂಡು ಛಲದಿಂದ ಅಧ್ಯಯನ ನಡೆಸಿದರೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಿ ಉನ್ನತ ಹುದ್ದೆಗಳನ್ನು ಅಲಂಕರಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಪ್ರತಿಯೊಬ್ಬರ ಯಶಸ್ಸಿನ ಹಾದಿಯೂ ವಿಭಿನ್ನವಾಗಿರುತ್ತದೆ. ಕಲ್ಯಾಣ ಕರ್ನಾಟಕ ಭಾಗವು ಅಭಿವೃದ್ಧಿಯಲ್ಲಿ ಹಿಂದುಳಿದಿರುವುದರಿಂದ ಇಲ್ಲಿನ ಯುವಜನರು ಹೆಚ್ಚಿನ ಪರಿಶ್ರಮದೊಂದಿಗೆ ಮುಂದೆ ಬರಬೇಕು. ಸರ್ಕಾರಿ ಉದ್ಯೋಗಗಳಿಗೆ ತೀವ್ರ ಸ್ಪರ್ಧೆ ಇರುವುದರಿಂದ ಅಭ್ಯರ್ಥಿಗಳು ಸಮರ್ಪಣಾ ಭಾವದಿಂದ ಅಧ್ಯಯನ ನಡೆಸಬೇಕು ಎಂದು ಸಲಹೆ ನೀಡಿದರು.

ರಾಯಚೂರು ಸಹಾಯಕ ಆಯುಕ್ತ ಡಾ. ಹಂಪಣ್ಣ ಸಜ್ಜನ ಮಾತನಾಡಿ, ಈ ಹಿಂದೆ ಕಲ್ಯಾಣ ಕರ್ನಾಟಕ ಭಾಗದ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸಲು ಧಾರವಾಡ, ಬೆಂಗಳೂರು ಅಥವಾ ಹೈದರಾಬಾದ್‌ನಂತಹ ನಗರಗಳಿಗೆ ತೆರಳಬೇಕಾಗಿತ್ತು. ಆದರೆ ಇದೀಗ ರಾಯಚೂರಿನಲ್ಲಿಯೇ ತರಬೇತಿ ಮತ್ತು ಅಧ್ಯಯನಕ್ಕೆ ಅಗತ್ಯ ಸೌಲಭ್ಯಗಳು ಲಭ್ಯವಾಗುತ್ತಿರುವುದು ಸಂತಸದ ಸಂಗತಿಯಾಗಿದೆ ಎಂದರು.

ಅಭ್ಯರ್ಥಿಗಳು ತಾವು ಅಧ್ಯಯನ ಮಾಡಬೇಕಾದ ವಿಷಯಗಳ ಬಗ್ಗೆ ಸ್ಪಷ್ಟ ತಿಳಿವಳಿಕೆ ಹೊಂದಿರಬೇಕು. ಸ್ವಯಂ ಪ್ರೇರಣೆಯೊಂದಿಗೆ ಓದಿನಲ್ಲಿ ಆಸಕ್ತಿ ಬೆಳೆಸಿಕೊಂಡರೆ ನಿರಂತರ ಅಧ್ಯಯನ ಬೇಸರ ಉಂಟುಮಾಡುವುದಿಲ್ಲ. ಪರೀಕ್ಷೆಗಳ ಸಿದ್ಧತೆ ಹಾಗೂ ಯಶಸ್ಸಿನ ಜವಾಬ್ದಾರಿ ಅಂತಿಮವಾಗಿ ಅಭ್ಯರ್ಥಿಗಳ ಮೇಲೆಯೇ ಇರುತ್ತದೆ ಎಂದು ಹೇಳಿದರು.

ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಮಾತನಾಡಿ, ಜ್ಞಾನಾರ್ಜನೆ ಜೀವನದಲ್ಲಿ ಯಶಸ್ಸು ಸಾಧಿಸಲು ಪ್ರಮುಖ ಸಾಧನವಾಗಿದೆ. ಜೀವನದಲ್ಲಿ ಉನ್ನತ ಸ್ಥಾನಕ್ಕೇರಬೇಕಾದರೆ ನಿರಂತರ ಅಧ್ಯಯನ ಅತ್ಯಗತ್ಯ. 'ತಲೆಬಾಗಿ ಓದು, ನಿನ್ನನ್ನು ತಲೆ ಎತ್ತಿ ನಿಲ್ಲುವಂತೆ ಮಾಡುತ್ತೇನೆ' ಎಂಬ ಮಾತಿನಂತೆ ವಿದ್ಯಾರ್ಥಿಗಳು ಪುಸ್ತಕಗಳೊಂದಿಗೆ ಉತ್ತಮ ಒಡನಾಟ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ರಾಯಚೂರು ಜಿಲ್ಲೆಯಲ್ಲಿ ಪಿಯುಸಿ ಹಾಗೂ ಪದವಿ ಪರೀಕ್ಷೆಗಳಲ್ಲಿ ಹೆಚ್ಚಿನ ಅಂಕ ಗಳಿಸುವ ಪ್ರತಿಭಾವಂತ ವಿದ್ಯಾರ್ಥಿಗಳಿದ್ದಾರೆ. ಆದರೆ ವಿವಿಧ ಸರ್ಕಾರಿ ನೇಮಕಾತಿಗಳಲ್ಲಿ ಜಿಲ್ಲೆಯ ಅಭ್ಯರ್ಥಿಗಳ ಆಯ್ಕೆ ಪ್ರಮಾಣ ಕಡಿಮೆ ಇರುವುದು ಗಮನಾರ್ಹವಾಗಿದೆ. ಪ್ರತಿಭೆಯಿದ್ದರೂ ಅದನ್ನು ಸರಿಯಾದ ದಿಕ್ಕಿನಲ್ಲಿ ಬಳಸಿಕೊಳ್ಳಲು ಸೂಕ್ತ ಮಾರ್ಗದರ್ಶನ ಅಗತ್ಯವಿದೆ. ಇಂತಹ ಉಚಿತ ತರಬೇತಿ ಕೇಂದ್ರಗಳು ಅಭ್ಯರ್ಥಿಗಳಿಗೆ ಹೆಚ್ಚಿನ ಅನುಕೂಲ ಒದಗಿಸಲಿದ್ದು, ಪ್ರತಿಯೊಬ್ಬರೂ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಗ್ರಂಥಾಲಯ ಅಧಿಕಾರಿ ಸಿದ್ದಾರ್ಥ ಭಾವಿಕಟ್ಟಿ, ಸ್ಪರ್ಧಾತ್ಮಕ ಪರೀಕ್ಷೆಗಳ ವಿಷಯ ತಜ್ಞ ನಂಜಾನಾಯಕ್, ನಗರ ಕೇಂದ್ರ ಗ್ರಂಥಾಲಯ ಅಧಿಕಾರಿ ನಿರ್ಮಲಾ, ವಿಶೇಷ ಕಾರ್ಯಕ್ರಮ ಅಧಿಕಾರಿ ಮೊಹಮ್ಮದ್ ಯೂಸುಫ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಉದ್ಯೋಗಾಕಾಂಕ್ಷಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕೂಲಿಕಾರರು, ಅಂಗನವಾಡಿ ಮಕ್ಕಳು ಹಾಗೂ ವಸತಿ ಶಾಲೆ ವಿದ್ಯಾರ್ಥಿಗಳಿಗೆ ತೊಂದರೆಯಾದರೆ ಅಧಿಕಾರಿಗಳ ವಿರುದ್ಧ ಕ್ರಮ: ಜಿ.ಪಂ. ಸಿಇಒ ಈಶ್ವರ ಕುಮಾರ್ ಕಾಂದೂ

ನಿರಂತರವಾಗಿ ಕೆಲಸ ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಗ್ರಾಮೀಣ ಭಾಗದ ಜನರು ಜೀವನೋಪಾಯಕ್ಕಾಗಿ ಉದ್ಯೋಗ ಖಾತರಿ ಯೋಜನೆಯನ್ನು ಅವಲಂಬಿಸಿರುವುದರಿಂದ ಕಾಮಗಾರಿಗಳ ಅನುಷ್ಠಾನದಲ್ಲಿ ವಿಳಂಬವಾಗಬಾರದು. ಕೆಲಸಕ್ಕೆ ಬರುವ ಕೂಲಿಕಾರರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕು. ಕೂಲಿ ಪಾವತಿಯಲ್ಲಿ ಅನಗತ್ಯ ವಿಳಂಬವಾಗದಂತೆ ಅಧಿಕಾರಿಗಳು ನಿಗಾ ವಹಿಸಬೇಕು ಎಂದು ಸೂಚಿಸಿದರು.

ನಂತರ ದೇವರಭೂಪುರ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿದ ಅವರು, ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಕುರಿತು ಅಧಿಕಾರಿಗಳು ಮತ್ತು ಸಿಬ್ಬಂದಿಯಿಂದ ಮಾಹಿತಿ ಪಡೆದುಕೊಂಡರು. ಬಾಕಿ ಉಳಿದಿರುವ ಕಾಮಗಾರಿಗಳನ್ನು ಚುರುಕುಗೊಳಿಸಿ, ಮುಂದಿನ ಎರಡು ವಾರಗಳೊಳಗೆ ನಿರೀಕ್ಷಿತ ಪ್ರಗತಿ ಸಾಧಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಮಕ್ಕಳ ಕಲಿಕೆ, ಆರೈಕೆ ಹಾಗೂ ಕೇಂದ್ರದಲ್ಲಿನ ವ್ಯವಸ್ಥೆಗಳನ್ನು ಪರಿಶೀಲಿಸಿದರು. ಅಂಗನವಾಡಿ ಕಾರ್ಯಕರ್ತೆಯರು ಮಕ್ಕಳನ್ನು ತಾಯಿಯಂತೆ ಪ್ರೀತಿ ಮತ್ತು ಕಾಳಜಿಯಿಂದ ನೋಡಿಕೊಳ್ಳಬೇಕು. ಮಕ್ಕಳಿಗೆ ಉತ್ತಮ ವಾತಾವರಣ ಕಲ್ಪಿಸಿದಾಗ ಅವರು ನಿಯಮಿತವಾಗಿ ಕೇಂದ್ರಕ್ಕೆ ಬರಲು ಆಸಕ್ತಿ ತೋರುತ್ತಾರೆ. ಮಕ್ಕಳಿಗೆ ಯಾವುದೇ ತೊಂದರೆಯಾಗದಂತೆ ಎಚ್ಚರಿಕೆ ವಹಿಸುವುದರ ಜೊತೆಗೆ ಕಲಿಕಾ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯಲ್ಲಿ ಅಂಗನವಾಡಿ ಕೇಂದ್ರಗಳ ಪಾತ್ರ ಮಹತ್ವದ್ದಾಗಿದ್ದು, ಮಕ್ಕಳ ಸುರಕ್ಷತೆ, ಪೌಷ್ಟಿಕ ಆಹಾರ ಹಾಗೂ ಕಲಿಕೆಗೆ ಸಂಬಂಧಿಸಿದ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವಂತೆ ಸೂಚಿಸಿದರು.

ಬಳಿಕ ವಸತಿ ಶಾಲೆಗೆ ಭೇಟಿ ನೀಡಿದ ಸಿಇಒ ಈಶ್ವರ ಕುಮಾರ್ ಕಾಂದೂ, ವಿದ್ಯಾರ್ಥಿಗಳಿಗೆ ವಿತರಿಸಲು ಸಂಗ್ರಹಿಸಿದ್ದ ಆಹಾರಧಾನ್ಯಗಳ ಗುಣಮಟ್ಟವನ್ನು ಪರಿಶೀಲಿಸಿದರು. ಅಡುಗೆ ಸಿಬ್ಬಂದಿಗೆ ಆಹಾರ ತಯಾರಿಕೆಯಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ವಿದ್ಯಾರ್ಥಿಗಳಿಗೆ ರುಚಿಕರ, ಗುಣಮಟ್ಟದ ಹಾಗೂ ಶುಚಿಯಾದ ಆಹಾರವನ್ನು ಒದಗಿಸಬೇಕು ಎಂದು ನಿರ್ದೇಶನ ನೀಡಿದರು.

ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಆರೋಗ್ಯ ಮತ್ತು ಸುರಕ್ಷತೆಯ ಬಗ್ಗೆ ಅಧಿಕಾರಿಗಳು ವಿಶೇಷ ಗಮನಹರಿಸಬೇಕು. ಆಹಾರ ಪೂರೈಕೆ ಹಾಗೂ ಮೂಲಸೌಕರ್ಯಗಳ ನಿರ್ವಹಣೆಯಲ್ಲಿ ಯಾವುದೇ ನಿರ್ಲಕ್ಷ್ಯಕ್ಕೆ ಅವಕಾಶ ನೀಡಬಾರದು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ, ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಹಾಯಕ ನಿರ್ದೇಶಕ ವೆಂಕಟೇಶ ದೇಸಾಯಿ, ತಾಲೂಕು ಯೋಜನಾಧಿಕಾರಿ ಮಹಿಬೂಬ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ನಾಗರತ್ನ, ತಾಂತ್ರಿಕ ಸಂಯೋಜಕ ಅಶೋಕ, ಐಇಸಿ ಸಂಯೋಜಕ ಬಾಲಪ್ಪ, ತಾಂತ್ರಿಕ ಸಹಾಯಕ ಮಾನಪ್ಪ, ಬಿಎಫ್‌ಟಿ ಚೆನ್ನಬಸವ, ಕಾಯಕ ಬಂಧುಗಳು ಹಾಗೂ ಕೂಲಿಕಾರರು ಉಪಸ್ಥಿತರಿದ್ದರು.

ಸಿಡಿಲು ಬಡಿದು ರೈತ ಪ್ರಭಣ್ಣ ಸಾವು: ಕುಟುಂಬಕ್ಕೆ ₹5 ಲಕ್ಷ ಪರಿಹಾರ ನೀಡಿ ಸಾಂತ್ವನ ಹೇಳಿದ ಶಾಸಕ ದದ್ದಲ್

ಪರಿಹಾರ ನೀಡಿದೆ ಎಂದು ತಿಳಿಸಿದರು.

ಪ್ರಕೃತಿ ವಿಕೋಪಗಳಿಂದ ತೊಂದರೆಗೆ ಒಳಗಾಗುವ ರೈತರು ಹಾಗೂ ಅವರ ಕುಟುಂಬಗಳ ನೆರವಿಗೆ ಸರ್ಕಾರ ಬದ್ಧವಾಗಿದೆ. ಸಂತ್ರಸ್ತ ಕುಟುಂಬಗಳು ಧೈರ್ಯ ಕಳೆದುಕೊಳ್ಳಬಾರದು. ಗಾಯಾಳುಗಳಿಗೆ ಅಗತ್ಯ ವೈದ್ಯಕೀಯ ಚಿಕಿತ್ಸೆ ದೊರೆಯುವಂತೆ ಹಾಗೂ ಅವರ ಕುಟುಂಬಗಳಿಗೆ ಸೂಕ್ತ ಸಹಾಯ ಒದಗಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಭರವಸೆ ನೀಡಿದರು.

ಮೃತ ಪ್ರಭಣ್ಣ ಅವರ ಆತ್ಮಕ್ಕೆ ಶಾಂತಿ ದೊರೆಯಲಿ. ಕುಟುಂಬದ ಸದಸ್ಯರಿಗೆ ಈ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಭಗವಂತ ಕರುಣಿಸಲಿ ಎಂದು ಪ್ರಾರ್ಥಿಸಿದ ಶಾಸಕರು, ಸಿಡಿಲು ಬಡಿತದಿಂದ ಗಾಯಗೊಂಡಿರುವ ನಾಲ್ವರೂ ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಭೀಮರಾವ್, ಗಿಲ್ಲೇಸೂಗೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗೇಂದ್ರ ಮಟಮಾರಿ, ಸೋಮಶೇಖರ್ ಪಾಟೀಲ್, ಮಲ್ಲಿಕಾರ್ಜುನ ಗೌಡ, ಜನಾರ್ದನ ಗೌಡ, ಸಂಗಮೇಶ ಭಂಡಾರಿ, ಷಣ್ಮುಖಪ್ಪ, ಮೌನೇಶ ನಾಯಕ, ಅಯ್ಯನಗೌಡ, ರಮೇಶ ರೊಸ್ಲಿ, ಕಂದಾಯ ನಿರೀಕ್ಷಕ ಹನುಮಂತಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಆಡಳಿತಾಧಿಕಾರಿ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಸುತ್ತಮುತ್ತಲಿನ ಗ್ರಾಮಗಳ ಪ್ರಮುಖರು ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

ಎಸ್‌ಐಆರ್ ಕರಡು ಮತದಾರರ ಪಟ್ಟಿಯಿಂದ ಕೈಬಿಟ್ಟವರಿಗೆ ಮತ್ತೊಂದು ಅವಕಾಶ: ಚುನಾವಣಾ ಆಯೋಗದಿಂದ ವಿಶೇಷ ಅಭಿಯಾನ

ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ಪಾರದರ್ಶಕತೆ ಕಾಪಾಡುವುದರ ಜೊತೆಗೆ ಅರ್ಹ ಮತದಾರರ ಹೆಸರುಗಳು ತಪ್ಪಾಗಿ ಕೈಬಿಡದಂತೆ ವಿಶೇಷ ನಿಗಾ ವಹಿಸಬೇಕು. ಅದೇ ವೇಳೆ ಮೃತಪಟ್ಟವರು, ಸ್ಥಳಾಂತರಗೊಂಡವರು ಹಾಗೂ ನಕಲಿ ನೋಂದಣಿಗಳ ಪರಿಶೀಲನೆಯನ್ನೂ ನಿಯಮಾನುಸಾರ ನಡೆಸಬೇಕು ಎಂದು ಚುನಾವಣಾ ಆಯೋಗ ತಿಳಿಸಿದೆ.

ಈಗಾಗಲೇ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡಿರುವ ಬಿಹಾರ ಮತ್ತು ಪಶ್ಚಿಮ ಬಂಗಾಳ ಸೇರಿದಂತೆ 20 ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿಯೂ ಮತದಾರರ ಪಟ್ಟಿಯಿಂದ ಹೊರಗುಳಿದ ಅರ್ಹರನ್ನು ಗುರುತಿಸಲು ವಿಶೇಷ ಕ್ರಮ ಕೈಗೊಳ್ಳುವಂತೆ ಆಯೋಗ ಸೂಚಿಸಿದೆ.

ಅರ್ಹ ಮತದಾರರ ಮತದಾನದ ಹಕ್ಕನ್ನು ಸಂರಕ್ಷಿಸುವುದರೊಂದಿಗೆ ಮತದಾರರ ಪಟ್ಟಿಯ ನಿಖರತೆ ಮತ್ತು ವಿಶ್ವಾಸಾರ್ಹತೆಯನ್ನು ಕಾಪಾಡುವುದು ಈ ಅಭಿಯಾನದ ಉದ್ದೇಶವಾಗಿದೆ. ಇದಕ್ಕಾಗಿ ಮುಖ್ಯ ಚುನಾವಣಾಧಿಕಾರಿಗಳು ಕಟ್ಟುನಿಟ್ಟಿನ ಮೇಲ್ವಿಚಾರಣೆ ನಡೆಸಿ, ಅರ್ಹ ಮತದಾರರಿಗೆ ಹೆಸರು ಸೇರ್ಪಡೆಯ ಅವಕಾಶ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಯೋಗ ನಿರ್ದೇಶಿಸಿದೆ.

ನಕಲಿ ವೈದ್ಯರ ಕ್ಲಿನಿಕ್ ಸೀಜ್: ಕೆಪಿಎಂಇ ಕಾಯ್ದೆಯಡಿ ಕಠಿಣ ಕ್ರಮಕ್ಕೆ ಡಾ. ನಂದಿತಾ ಎಚ್ಚರಿಕೆ

ಪ್ರಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಕೆಲವರು ವೈದ್ಯಕೀಯ ಶಿಕ್ಷಣವನ್ನು ಪೂರ್ಣಗೊಳಿಸದೆ ಅಥವಾ ಖಾಸಗಿ ನರ್ಸಿಂಗ್ ಹೋಮ್‌ಗಳು, ಆಸ್ಪತ್ರೆಗಳು ಹಾಗೂ ಕ್ಲಿನಿಕ್‌ಗಳಲ್ಲಿ ಸ್ವಚ್ಛತಾ ಕಾರ್ಯ, ಗಾಯಗಳಿಗೆ ಪಟ್ಟಿ ಕಟ್ಟುವುದು ಸೇರಿದಂತೆ ಸಣ್ಣಪುಟ್ಟ ಕೆಲಸಗಳನ್ನು ನಿರ್ವಹಿಸಿದ ಅನುಭವದ ಆಧಾರದಲ್ಲಿ ತಾವೇ ವೈದ್ಯರೆಂದು ಹೇಳಿಕೊಂಡು ಚಿಕಿತ್ಸೆ ನೀಡುತ್ತಿರುವುದು ಕಂಡುಬರುತ್ತಿದೆ. ವೈದ್ಯಕೀಯ ವಿದ್ಯಾರ್ಹತೆ ಮತ್ತು ಅಗತ್ಯ ತರಬೇತಿ ಇಲ್ಲದೆ ರೋಗಿಗಳಿಗೆ ಚಿಕಿತ್ಸೆ ನೀಡುವುದು ಅತ್ಯಂತ ಗಂಭೀರ ವಿಷಯವಾಗಿದ್ದು, ಇಂತಹ ಚಟುವಟಿಕೆಗಳಿಂದ ಸಾರ್ವಜನಿಕರ ಆರೋಗ್ಯ ಮತ್ತು ಜೀವಕ್ಕೆ ಅಪಾಯ ಉಂಟಾಗುವ ಸಾಧ್ಯತೆಯಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ವಿಶೇಷವಾಗಿ ಗ್ರಾಮೀಣ ಭಾಗದ ಸಾರ್ವಜನಿಕರು ವೈದ್ಯಕೀಯ ಸೇವೆ ಪಡೆಯುವಾಗ ಹೆಚ್ಚಿನ ಎಚ್ಚರಿಕೆ ವಹಿಸಬೇಕು. ಚಿಕಿತ್ಸೆ ನೀಡುವ ವ್ಯಕ್ತಿ ಮಾನ್ಯತೆ ಪಡೆದ ವೈದ್ಯಕೀಯ ಪದವಿ ಹಾಗೂ ಅಗತ್ಯ ನೋಂದಣಿ ಹೊಂದಿದ್ದಾರೆಯೇ ಎಂಬುದನ್ನು ಖಚಿತಪಡಿಸಿಕೊಂಡ ನಂತರವೇ ಚಿಕಿತ್ಸೆ ಪಡೆಯಬೇಕು. ಕೇವಲ ಕ್ಲಿನಿಕ್ ಫಲಕ ಅಥವಾ ವೈದ್ಯರೆಂದು ಹೇಳಿಕೊಳ್ಳುವ ಮಾತನ್ನು ನಂಬಿ ಚಿಕಿತ್ಸೆ ಪಡೆಯಬಾರದು ಎಂದು ಸಲಹೆ ನೀಡಿದ್ದಾರೆ.

ಜಿಲ್ಲೆಯ ಯಾವುದೇ ಗ್ರಾಮ ಅಥವಾ ಪಟ್ಟಣದಲ್ಲಿ ವೈದ್ಯಕೀಯ ಅರ್ಹತೆ ಇಲ್ಲದೆ ಕ್ಲಿನಿಕ್ ನಡೆಸುತ್ತಿರುವುದು ಸಾರ್ವಜನಿಕರ ಗಮನಕ್ಕೆ ಬಂದರೆ ಕೂಡಲೇ ಆರೋಗ್ಯ ಇಲಾಖೆಗೆ ಮಾಹಿತಿ ನೀಡಬೇಕು. ನಕಲಿ ವೈದ್ಯರ ಹಾವಳಿಯನ್ನು ತಡೆಗಟ್ಟಲು ಸಾರ್ವಜನಿಕರ ಸಹಕಾರವೂ ಅತ್ಯಂತ ಅಗತ್ಯವಾಗಿದೆ ಎಂದು ತಿಳಿಸಿದ್ದಾರೆ.

ಆರೋಗ್ಯ ಸಮಸ್ಯೆಗಳು ಎದುರಾದಾಗ ಸಾರ್ವಜನಿಕರು ಸರ್ಕಾರಿ ಆಸ್ಪತ್ರೆಗಳು ಅಥವಾ ಮಾನ್ಯತೆ ಪಡೆದ ವೈದ್ಯಕೀಯ ಅರ್ಹತೆ ಹೊಂದಿರುವ ವೈದ್ಯರು ಕಾರ್ಯನಿರ್ವಹಿಸುವ ಅಧಿಕೃತ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಬೇಕು. ಅನಧಿಕೃತವಾಗಿ ಚಿಕಿತ್ಸೆ ನೀಡುವವರನ್ನು ಆಶ್ರಯಿಸದೆ ತಮ್ಮ ಆರೋಗ್ಯದ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ಮನವಿ ಮಾಡಿದ್ದಾರೆ.

ಜಿಲ್ಲೆಯಾದ್ಯಂತ ನಕಲಿ ವೈದ್ಯರ ವಿರುದ್ಧ ತಪಾಸಣೆ ಮತ್ತು ಕಾನೂನು ಕ್ರಮ ಮುಂದುವರಿಯಲಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

371(ಜೆ) ಸಮಿತಿ ಕಾರ್ಯವ್ಯಾಪ್ತಿ ವಿಸ್ತರಿಸಿ ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಿ: ಸಚಿವ ಡಾ. ಅಜಯ್ ಧರ್ಮಸಿಂಗ್

ಸಭೆಗಳಲ್ಲಿ ಹಲವು ನಿರ್ಣಯಗಳನ್ನು ಕೈಗೊಳ್ಳಲಾಗಿದ್ದರೂ ಅವುಗಳ ಅನುಷ್ಠಾನದಲ್ಲಿ ವಿಳಂಬವಾಗಿರುವ ವಿಷಯ ಸಭೆಯಲ್ಲಿ ಚರ್ಚೆಯಾಯಿತು. ಹಿಂದಿನ ಸಭೆಗಳ ನಿರ್ಣಯಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಹಾಗೂ ಸಂಬಂಧಪಟ್ಟ ಇಲಾಖೆಗಳು ನಿಗದಿತ ಕಾಲಮಿತಿಯೊಳಗೆ ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಎಂದು ಸಭೆಯ ಅಧ್ಯಕ್ಷರು ಸೂಚಿಸಿದರು.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಪ್ರತಿವರ್ಷ ₹5,000 ಕೋಟಿ ವಿಶೇಷ ಅನುದಾನ ಒದಗಿಸುತ್ತಿದೆ. ಇದೇ ಮಾದರಿಯಲ್ಲಿ ಕೇಂದ್ರ ಸರ್ಕಾರವೂ ಈ ಭಾಗದ ಅಭಿವೃದ್ಧಿಗೆ ಪ್ರತ್ಯೇಕ ವಿಶೇಷ ಅನುದಾನ ಬಿಡುಗಡೆ ಮಾಡಬೇಕು. ಈ ಕುರಿತು ಕೇಂದ್ರ ಸರ್ಕಾರವನ್ನು ಒತ್ತಾಯಿಸಲು ಸಚಿವ ಸಂಪುಟ ಉಪಸಮಿತಿ ಸೂಕ್ತ ನಿಲುವು ಕೈಗೊಳ್ಳಬೇಕು ಎಂದು ಡಾ. ಅಜಯ್ ಧರ್ಮಸಿಂಗ್ ಪ್ರಸ್ತಾಪಿಸಿದರು.

ವಿಶೇಷ ಸ್ಥಾನಮಾನ ಪಡೆದಿರುವ ಪ್ರದೇಶದ ಅಭಿವೃದ್ಧಿಯ ಜವಾಬ್ದಾರಿ ರಾಜ್ಯ ಸರ್ಕಾರಕ್ಕೆ ಮಾತ್ರ ಸೀಮಿತವಾಗಬಾರದು. ಪ್ರಾದೇಶಿಕ ಅಸಮಾನತೆ ನಿವಾರಣೆಗಾಗಿ ಕೇಂದ್ರ ಸರ್ಕಾರವೂ ವಿಶೇಷ ಆರ್ಥಿಕ ನೆರವು ಒದಗಿಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಬೆಂಗಳೂರು, ಮೈಸೂರು ಹಾಗೂ ಬೆಳಗಾವಿ ವಿಭಾಗಗಳಿಗೆ ವಿವಿಧ ಇಲಾಖೆಗಳ ಮೂಲಕ ಹಂಚಿಕೆಯಾಗುತ್ತಿರುವ ಅಭಿವೃದ್ಧಿ ಅನುದಾನದ ಅನುಪಾತದಲ್ಲಿಯೇ ಕಲ್ಯಾಣ ಕರ್ನಾಟಕ ವಿಭಾಗಕ್ಕೂ ಅನುದಾನ ಒದಗಿಸಬೇಕು. ರಾಜ್ಯದ ಇತರ ವಿಭಾಗಗಳಿಗೆ ದೊರೆಯುವ ಸಾಮಾನ್ಯ ಇಲಾಖಾವಾರು ಅನುದಾನವನ್ನು ಕಲ್ಯಾಣ ಕರ್ನಾಟಕಕ್ಕೂ ಸಮಾನವಾಗಿ ಹಂಚಿಕೆ ಮಾಡಿದ ನಂತರ ಹೆಚ್ಚುವರಿಯಾಗಿ ವಿಶೇಷ ಅಭಿವೃದ್ಧಿ ಅನುದಾನ ನೀಡಬೇಕು. ಆಗ ಮಾತ್ರ ಪ್ರಾದೇಶಿಕ ಅಭಿವೃದ್ಧಿಯಲ್ಲಿನ ಅಂತರವನ್ನು ಕಡಿಮೆ ಮಾಡಲು ಸಾಧ್ಯ ಎಂದು ವಿವರಿಸಿದರು.

ಕಲ್ಯಾಣ ಕರ್ನಾಟಕದಲ್ಲಿ ವಿವಿಧ ಇಲಾಖೆಗಳು ಕೈಗೊಳ್ಳುವ ಅಭಿವೃದ್ಧಿ ಕಾಮಗಾರಿಗಳಿಗೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ (ಕೆಕೆಆರ್‌ಡಿಬಿ) ಅನುದಾನ ಬಳಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಮಂಡಳಿಯ ಗಮನಕ್ಕೆ ತಂದು, ಸಚಿವ ಸಂಪುಟದ ಮುಂದೆ ಪ್ರಸ್ತಾವನೆ ಮಂಡಿಸುವಂತೆ ಸಂಬಂಧಪಟ್ಟ ಇಲಾಖೆಗಳಿಗೆ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದರು.

ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳಲ್ಲಿನ ಅಸಮಾನತೆಯನ್ನು ನಿವಾರಿಸುವ ಅಗತ್ಯವನ್ನೂ ಸಚಿವರು ಸಭೆಯ ಗಮನಕ್ಕೆ ತಂದರು. ಬೆಂಗಳೂರು, ಮೈಸೂರು ಹಾಗೂ ಬೆಳಗಾವಿ ವಿಭಾಗಗಳಿಗೆ ಯಾವ ಅನುಪಾತದಲ್ಲಿ ಶಿಕ್ಷಕರ ಹುದ್ದೆಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಹಂಚಿಕೆ ಮಾಡಲಾಗುತ್ತಿದೆಯೋ, ಅದೇ ಮಾನದಂಡದಡಿ ಕಲ್ಯಾಣ ಕರ್ನಾಟಕಕ್ಕೂ ಹಂಚಿಕೆ ಮಾಡಬೇಕು ಎಂದು ಆಗ್ರಹಿಸಿದರು.

ಇದೇ ತತ್ವವನ್ನು ಇತರ ಸರ್ಕಾರಿ ಇಲಾಖೆಗಳ ಹುದ್ದೆಗಳು ಹಾಗೂ ಸಿಬ್ಬಂದಿ ಹಂಚಿಕೆಯಲ್ಲಿಯೂ ಅನುಸರಿಸಬೇಕು. ಕಲ್ಯಾಣ ಕರ್ನಾಟಕದ ಜನತೆಗೆ ಶಿಕ್ಷಣ, ಆರೋಗ್ಯ ಮತ್ತು ಆಡಳಿತಾತ್ಮಕ ಸೇವೆಗಳು ಸಮರ್ಪಕವಾಗಿ ದೊರೆಯುವಂತೆ ಅಗತ್ಯ ಸಿಬ್ಬಂದಿ ಹಾಗೂ ಮೂಲಸೌಕರ್ಯ ಒದಗಿಸಲು ಉಪಸಮಿತಿ ಸೂಕ್ತ ನಿರ್ಣಯ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಅನುಚ್ಛೇದ 371(ಜೆ)ಯ ಆಶಯವು ಕೇವಲ ಸರ್ಕಾರಿ ಉದ್ಯೋಗಗಳಲ್ಲಿ ಮೀಸಲಾತಿ ಕಲ್ಪಿಸುವುದಲ್ಲ. ಕಲ್ಯಾಣ ಕರ್ನಾಟಕವನ್ನು ಶಿಕ್ಷಣ, ಆರೋಗ್ಯ, ಉದ್ಯೋಗ, ಆಡಳಿತ ಮತ್ತು ಮೂಲಸೌಕರ್ಯ ಕ್ಷೇತ್ರಗಳಲ್ಲಿ ರಾಜ್ಯದ ಇತರ ಭಾಗಗಳಿಗೆ ಸಮಾನವಾಗಿ ಅಭಿವೃದ್ಧಿಪಡಿಸುವುದಾಗಿದೆ. ಈ ಉದ್ದೇಶವನ್ನು ಪರಿಣಾಮಕಾರಿಯಾಗಿ ಈಡೇರಿಸಲು ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸಚಿವ ಡಾ. ಅಜಯ್ ಧರ್ಮಸಿಂಗ್ ಹೇಳಿದರು.

ಸಭೆಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್, ಸಚಿವ ಸಂಪುಟ ಉಪಸಮಿತಿಯ ಸದಸ್ಯರು ಹಾಗೂ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ತಿಡಿಗೋಳ ಜಾತ್ರೆಯ ಸಣ್ಣ ವಿವಾದಕ್ಕೆ ಕೋಮು ಬಣ್ಣ ನೀಡಲಾಗುತ್ತಿದೆ: ಅಮರೇಶ ಗಚ್ಚಿನಮನೆ ಆರೋಪ

ನಡೆಯಬಾರದು. ಗ್ರಾಮದಲ್ಲಿ ಈ ಹಿಂದಿನಿಂದಲೂ ಇರುವ ಸೌಹಾರ್ದಯುತ ವಾತಾವರಣವನ್ನು ಕಾಪಾಡಿಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಘಟನೆಗೆ ಸಂಬಂಧಿಸಿದಂತೆ ಎರಡೂ ಗುಂಪುಗಳಿಂದ ಪ್ರತ್ಯೇಕ ಪ್ರಕರಣಗಳು ದಾಖಲಾಗಿದ್ದು, ಪೊಲೀಸರು ನಿಷ್ಪಕ್ಷಪಾತವಾಗಿ ತನಿಖೆ ನಡೆಸಿ ವಾಸ್ತವಾಂಶಗಳನ್ನು ಬಹಿರಂಗಪಡಿಸಬೇಕು. ತನಿಖೆಯಲ್ಲಿ ತಪ್ಪಿತಸ್ಥರೆಂದು ಕಂಡುಬರುವವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲು ನಮ್ಮ ಯಾವುದೇ ಆಕ್ಷೇಪವಿಲ್ಲ. ಆದರೆ ಘಟನೆಯ ಸತ್ಯಾಸತ್ಯತೆ ತಿಳಿಯದೆ ಗ್ರಾಮದ ಬಗ್ಗೆ ತಪ್ಪು ಅಭಿಪ್ರಾಯ ಮೂಡಿಸುವುದು ಹಾಗೂ ಕೋಮು ಸೌಹಾರ್ದತೆಗೆ ಧಕ್ಕೆ ತರುವ ಹೇಳಿಕೆಗಳನ್ನು ನೀಡುವುದನ್ನು ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ತಿಡಿಗೋಳ ಗ್ರಾಮದಲ್ಲಿ ಎಲ್ಲ ಸಮುದಾಯಗಳ ಜನರು ಪರಸ್ಪರ ಗೌರವದಿಂದ ಬದುಕುತ್ತಿದ್ದು, ಮುಂದೆಯೂ ಇದೇ ರೀತಿಯ ಶಾಂತಿ ಮತ್ತು ಸಾಮರಸ್ಯದ ವಾತಾವರಣ ಮುಂದುವರಿಯಬೇಕು. ಯಾವುದೇ ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡದೆ ಗ್ರಾಮದ ಏಕತೆ ಕಾಪಾಡಿಕೊಳ್ಳಲು ಸಹಕರಿಸಬೇಕು ಎಂದು ಅಮರೇಶ ಗಚ್ಚಿನಮನೆ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಗ್ರಾಮಸ್ಥರಾದ ಶಿವಪುತ್ರಯ್ಯ ಸ್ವಾಮಿ, ಕೆ. ಶರಣಪ್ಪ, ಅಮರೇಗೌಡ, ಶೇಖರಪ್ಪ, ಆದಪ್ಪ ಗುಡದೂರ, ವೆಂಕನಗೌಡ ಪೊಲೀಸ್ ಪಾಟೀಲ್ ಹಾಗೂ ವೆಂಕಣ್ಣ ಜಿನ್ನದ ಉಪಸ್ಥಿತರಿದ್ದರು.

ಪ್ರಿಯಾಂಕ್ ಖರ್ಗೆ ಕ್ಷಮೆಯಾಚನೆಗೆ ಆಗ್ರಹಿಸಿ ಜೆಡಿಎಸ್ ಪ್ರತಿಭಟನೆ

ಮತ್ತು ಮೊಸರಿನ ಬೆಲೆ ಹೆಚ್ಚಿಸಿರುವುದರಿಂದ ಬಡವರು, ಮಧ್ಯಮ ವರ್ಗದವರು, ಕೂಲಿ ಕಾರ್ಮಿಕರು ಹಾಗೂ ರೈತ ಕುಟುಂಬಗಳು ಸಂಕಷ್ಟ ಎದುರಿಸುವಂತಾಗಿದೆ. ಜನಸಾಮಾನ್ಯರ ಹಿತದೃಷ್ಟಿಯಿಂದ ಸರ್ಕಾರ ಕೂಡಲೇ ದರ ಏರಿಕೆ ನಿರ್ಧಾರಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.


ಇದೇ ವೇಳೆ ರೈತರಿಗೆ ಬೆಳೆಹಾನಿ ಪರಿಹಾರ ವಿತರಣೆ ಕುರಿತು ಸರ್ಕಾರ ಸ್ಪಷ್ಟ ಮಾಹಿತಿ ನೀಡಬೇಕು. ಕಬ್ಬು ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಸರ್ಕಾರಿ ನೌಕರರು ಹಾಗೂ ಅಂಗನವಾಡಿ ಕಾರ್ಯಕರ್ತೆಯರಿಗೆ ವೇತನ ಪಾವತಿಯಲ್ಲಿ ವಿಳಂಬವಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ರಾಯಚೂರು ಜಿಲ್ಲೆಯಲ್ಲಿ ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳು ವರದಿಯಾಗಿದ್ದರೂ ಸಂಬಂಧಪಟ್ಟ ಸಚಿವರು ಜಿಲ್ಲೆಗೆ ಭೇಟಿ ನೀಡಿ ಸಂತ್ರಸ್ತರ ಸಮಸ್ಯೆಗಳನ್ನು ಆಲಿಸುವ ಹಾಗೂ ಅವರಿಗೆ ಧೈರ್ಯ ತುಂಬುವ ಕೆಲಸ ಮಾಡಿಲ್ಲ ಎಂದು ಪ್ರತಿಭಟನಾಕಾರರು ಅಸಮಾಧಾನ ವ್ಯಕ್ತಪಡಿಸಿದರು. ದೌರ್ಜನ್ಯ ಪ್ರಕರಣಗಳ ಸಂತ್ರಸ್ತರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸರ್ಕಾರ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸಿ, ಮನವಿಯಲ್ಲಿ ಉಲ್ಲೇಖಿಸಿರುವ ಬೇಡಿಕೆಗಳನ್ನು ಶೀಘ್ರ ಈಡೇರಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಜಿಲ್ಲೆಯಾದ್ಯಂತ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಜೆಡಿಎಸ್ ಮುಖಂಡರು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಎಂ. ವಿರುಪಾಕ್ಷಿ, ಜಿಲ್ಲಾ ಕಾರ್ಯಾಧ್ಯಕ್ಷ ಎನ್. ಶಿವಶಂಕರ, ರಾಜ್ಯ ಕಾರ್ಯದರ್ಶಿ ಲಕ್ಷ್ಮೀಪತಿ ಗಾಣದಾಳ, ರಾಜ್ಯ ಉಪಾಧ್ಯಕ್ಷ ನರಸಿಂಹ ನಾಯಕ, ನಗರ ಅಧ್ಯಕ್ಷ ಬಿ. ತಿಮ್ಮಾರೆಡ್ಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮಕೃಷ್ಣ, ಜಿಲ್ಲಾ ಒಬಿಸಿ ಘಟಕದ ಅಧ್ಯಕ್ಷ ಜಂಬುನಾಥ ಯಾದವ, ಗ್ರಾಮಾಂತರ ಅಧ್ಯಕ್ಷ ನಾಗರಾಜಗೌಡ, ಜಿಲ್ಲಾ ಪರಿಶಿಷ್ಟ ಘಟಕದ ಅಧ್ಯಕ್ಷ ಹಂಪಯ್ಯ ನಾಯಕ, ನರಸಪ್ಪ ಆಶಾಪೂರ, ಮುಖಂಡರಾದ ಪಿ. ರಾಜು, ನರಸಿಂಹಲು, ಆಂಜಿನಯ್ಯ ಯಾದವ, ಸೀಮಾ ನದಾಫ್, ಶಾಲಂ, ಅಮ್ಮದ್ ಹುಸೇನ್, ಸಾಬೀರ್, ಪರ್ವೇಜ್, ಅಲಂಬಾಬು, ಆದಿರಾಜ್, ವೆಂಕಟಸ್ವಾಮಿ, ಅಮಿತ್ ಸುಂಕಾರಿ ಸೇರಿದಂತೆ ವಕೀಲರು ಹಾಗೂ ಪಕ್ಷದ ಹಲವು ಕಾರ್ಯಕರ್ತರು ಉಪಸ್ಥಿತರಿದ್ದರು.

ಎಸ್‌ಸಿ, ಎಸ್‌ಟಿ ಮೀಸಲಾತಿ ಹೆಚ್ಚಳ ರದ್ದತಿ ಖಂಡಿಸಿ ದಸಂಸ ಪ್ರತಿಭಟನೆ: ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲು ಆಗ್ರಹ



ರಾಯಚೂರು: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಪ್ರಮಾಣ ಹೆಚ್ಚಳಕ್ಕೆ ಸಂಬಂಧಿಸಿದ ಹಿಂದಿನ ಸರ್ಕಾರದ ಆದೇಶವನ್ನು ಹೈಕೋರ್ಟ್ ರದ್ದುಗೊಳಿಸಿರುವುದನ್ನು ವಿರೋಧಿಸಿ, ರಾಜ್ಯ ಸರ್ಕಾರ ತಕ್ಷಣ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬೇಕು ಹಾಗೂ ಹೆಚ್ಚುವರಿ ಮೀಸಲಾತಿಗೆ ಸಂವಿಧಾನಾತ್ಮಕ ರಕ್ಷಣೆ ಕಲ್ಪಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಶುಕ್ರವಾರ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನಾ ಧರಣಿ ನಡೆಸಲಾಯಿತು.

ಪರಿಶಿಷ್ಟ ಸಮುದಾಯಗಳ ಮೀಸಲಾತಿ ಹಕ್ಕುಗಳನ್ನು ರಕ್ಷಿಸುವುದು ಹಾಗೂ ಸಾಮಾಜಿಕ ನ್ಯಾಯದ ಆಶಯಗಳನ್ನು ಎತ್ತಿಹಿಡಿಯುವ ಉದ್ದೇಶದಿಂದ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಏಕಕಾಲದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದ್ದು, ಸರ್ಕಾರದ ಗಮನ ಸೆಳೆಯಲು ಪ್ರಯತ್ನಿಸಲಾಯಿತು.

ಪ್ರತಿಭಟನೆಯಲ್ಲಿ ಮಾತನಾಡಿದ ಮುಖಂಡರು, ರಾಜನಹಳ್ಳಿಯ ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದ ಸ್ವಾಮೀಜಿಗಳ ನೇತೃತ್ವದಲ್ಲಿ ನಡೆದ ನಿರಂತರ ಹೋರಾಟದ ಪರಿಣಾಮವಾಗಿ ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಿತ್ತು. ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಆಯೋಗದ ಶಿಫಾರಸು ಆಧರಿಸಿ ಪರಿಶಿಷ್ಟ ಜಾತಿಯ 101 ಸಮುದಾಯಗಳಿಗೆ ಇದ್ದ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಹಾಗೂ ಪರಿಶಿಷ್ಟ ಪಂಗಡದ 51 ಸಮುದಾಯಗಳಿಗೆ ಇದ್ದ ಮೀಸಲಾತಿಯನ್ನು ಶೇ.3ರಿಂದ ಶೇ.7ಕ್ಕೆ ಏರಿಸಲಾಗಿತ್ತು ಎಂದು ವಿವರಿಸಿದರು.

ಈ ನಿರ್ಧಾರದಿಂದ ರಾಜ್ಯದ ಒಟ್ಟು ಮೀಸಲಾತಿ ಪ್ರಮಾಣ ಶೇ.50ರಿಂದ ಶೇ.56ಕ್ಕೆ ಹೆಚ್ಚಳವಾಗಿತ್ತು. ಆದರೆ ಮೀಸಲಾತಿ ಹೆಚ್ಚಳಕ್ಕೆ ಸಂಬಂಧಿಸಿದ ಆದೇಶವನ್ನು ಹೈಕೋರ್ಟ್ ರದ್ದುಗೊಳಿಸಿರುವುದು ಪರಿಶಿಷ್ಟ ಸಮುದಾಯಗಳ ಹಿತಾಸಕ್ತಿಗೆ ಹಿನ್ನಡೆಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ವಿಶೇಷ ಮೇಲ್ಮನವಿ ಸಲ್ಲಿಸಬೇಕು. ಅಲ್ಲದೆ, ಎಲ್ಲ ರಾಜಕೀಯ ಪಕ್ಷಗಳ ಪ್ರತಿನಿಧಿಗಳನ್ನು ಒಳಗೊಂಡ ನಿಯೋಗವನ್ನು ಕೇಂದ್ರ ಸರ್ಕಾರದ ಬಳಿಗೆ ಕರೆದೊಯ್ದು ಹೆಚ್ಚುವರಿ ಮೀಸಲಾತಿಯನ್ನು ಸಂವಿಧಾನದ 9ನೇ ಅನುಸೂಚಿಗೆ ಸೇರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮೀಸಲಾತಿ ರಕ್ಷಣೆಯ ಜೊತೆಗೆ ಪರಿಶಿಷ್ಟ ಸಮುದಾಯಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಸಂಬಂಧಿಸಿದ 15 ಪ್ರಮುಖ ಬೇಡಿಕೆಗಳನ್ನು ಸರ್ಕಾರದ ಮುಂದಿಟ್ಟರು. ಬಡ ಹಾಗೂ ನಿವೇಶನರಹಿತ ಕುಟುಂಬಗಳಿಗೆ ಸರ್ಕಾರಿ ಅಥವಾ ಖಾಸಗಿ ಜಮೀನು ಗುರುತಿಸಿ ನಿವೇಶನ ಹಂಚಿಕೆ ಮಾಡಬೇಕು. ನಿವೇಶನ ಹೊಂದಿದ್ದರೂ ಸ್ವಂತ ಮನೆ ಇಲ್ಲದ ಕುಟುಂಬಗಳಿಗೆ ವಸತಿ ಯೋಜನೆಗಳಡಿ ಮನೆ ಮಂಜೂರು ಮಾಡಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಸಂಸ್ಥಾಪಕ ಪ್ರೊ. ಬಿ. ಕೃಷ್ಣಪ್ಪ ಅವರ ಸಾಮಾಜಿಕ ಹೋರಾಟ ಹಾಗೂ ದಲಿತ ಸಮುದಾಯಗಳ ಏಳಿಗೆಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಿ ಗೌರವಿಸಬೇಕು. ಅವರ ಜನ್ಮದಿನವನ್ನು ಸರ್ಕಾರದ ವತಿಯಿಂದ ಅಧಿಕೃತವಾಗಿ ಆಚರಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಕಂದಾಯ ಕಾಯ್ದೆಯ ನಮೂನೆ 57ರಡಿ ಅರ್ಜಿ ಸಲ್ಲಿಸಿರುವ ಬಗರ್ ಹುಕುಂ ಸಾಗುವಳಿದಾರರ ಜಮೀನುಗಳನ್ನು ಸಕ್ರಮಗೊಳಿಸಿ ಹಕ್ಕುಪತ್ರ ವಿತರಿಸಬೇಕು. ಸರ್ಕಾರಿ ಜಾಗಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ಸಂಬಂಧಿಸಿದಂತೆ 94 ಮತ್ತು 94ಸಿ ನಿಯಮಗಳಡಿ ಅರ್ಹ ಪ್ರಕರಣಗಳನ್ನು ಸಕ್ರಮಗೊಳಿಸಿ ವಸತಿ ಭದ್ರತೆ ಒದಗಿಸಬೇಕು ಎಂದು ಆಗ್ರಹಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಡುವ ಅನುದಾನವನ್ನು ಉದ್ದೇಶಿತ ಯೋಜನೆಗಳಿಗೆ ಸಮರ್ಪಕವಾಗಿ ಬಳಸಬೇಕು. ಅನುದಾನದ ದುರ್ಬಳಕೆ ಹಾಗೂ ಬೇರೆ ಉದ್ದೇಶಗಳಿಗೆ ವರ್ಗಾವಣೆ ತಡೆಯಲು ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆ-2013ರ ಸೆಕ್ಷನ್ 7(ಸಿ) ರದ್ದುಪಡಿಸಬೇಕು ಎಂದು ಒತ್ತಾಯಿಸಿದರು.

ಜಾತಿ ಹಾಗೂ ಕೋಮು ಸಂಘರ್ಷಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವ್ಯಕ್ತಿಗಳು ಮೃತಪಟ್ಟ ಸಂದರ್ಭದಲ್ಲಿ ಅವರ ಕುಟುಂಬಗಳಿಗೆ ನೀಡುವ ಪರಿಹಾರವನ್ನು ₹8.25 ಲಕ್ಷದಿಂದ ₹25 ಲಕ್ಷಕ್ಕೆ ಹೆಚ್ಚಿಸಬೇಕು. ಸಂತ್ರಸ್ತ ಕುಟುಂಬದ ಒಬ್ಬ ಸದಸ್ಯರಿಗೆ ಸರ್ಕಾರಿ ಉದ್ಯೋಗ ಕಲ್ಪಿಸುವ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು.

ಗಂಗಾ ಕಲ್ಯಾಣ, ಭೂ ಒಡೆತನ ಹಾಗೂ ಉದ್ಯಮಶೀಲತೆ ಸೇರಿದಂತೆ ವಿವಿಧ ಅಭಿವೃದ್ಧಿ ನಿಗಮಗಳ ಯೋಜನೆಗಳಡಿ ಅರ್ಹ ಫಲಾನುಭವಿಗಳಿಗೆ ಸಾಲ ಮತ್ತು ಸಹಾಯಧನವನ್ನು ವಿಳಂಬವಿಲ್ಲದೆ ಮಂಜೂರು ಮಾಡಬೇಕು. 2026-27ನೇ ಸಾಲಿನಲ್ಲಿ ಯೋಜನೆಗಳ ಘಟಕ ವೆಚ್ಚ ಹಾಗೂ ಫಲಾನುಭವಿಗಳ ಗುರಿಯನ್ನು ಹೆಚ್ಚಿಸುವ ಮೂಲಕ ಹೆಚ್ಚಿನ ಕುಟುಂಬಗಳಿಗೆ ಸೌಲಭ್ಯ ತಲುಪಿಸಬೇಕು ಎಂದು ಮನವಿ ಮಾಡಿದರು.

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಆದ್ಯತೆಯ ಮೇರೆಗೆ ಭರ್ತಿ ಮಾಡಬೇಕು. ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳು ಹಾಗೂ ವಸತಿ ಶಾಲೆಗಳಲ್ಲಿ ಗುತ್ತಿಗೆ ಮತ್ತು ಹೊರಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರನ್ನು ಖಾಯಂಗೊಳಿಸಬೇಕು. ಕಂದಾಯ ಇಲಾಖೆಯ ಗ್ರಾಮ ಸಹಾಯಕರ ಸೇವೆಯನ್ನೂ ಖಾಯಂಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ದೇವದಾಸಿ ಹಾಗೂ ವಿಧವಾ ಮಹಿಳೆಯರಿಗೆ ನೀಡಲಾಗುತ್ತಿರುವ ಮಾಸಾಶನವನ್ನು ₹5,000ಕ್ಕೆ ಹೆಚ್ಚಿಸಬೇಕು. ಸರ್ಕಾರಿ ವಸತಿ ನಿಲಯಗಳ ವಿದ್ಯಾರ್ಥಿಗಳ ಮಾಸಿಕ ಭೋಜನ ವೆಚ್ಚವನ್ನು ₹1,000ಕ್ಕೆ ಏರಿಸಿ ಗುಣಮಟ್ಟದ ಆಹಾರ ಒದಗಿಸಲು ಅಗತ್ಯ ಅನುದಾನ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆ-1989ರಡಿ ದಾಖಲಾಗಿರುವ ಪ್ರಕರಣಗಳ ಸಂತ್ರಸ್ತ ಕುಟುಂಬಗಳಿಗೆ ಬಾಕಿ ಇರುವ ಪರಿಹಾರವನ್ನು ತಕ್ಷಣ ಬಿಡುಗಡೆ ಮಾಡಬೇಕು. ದೌರ್ಜನ್ಯ ಪ್ರಕರಣಗಳಲ್ಲಿ ಸಂತ್ರಸ್ತರಿಗೆ ನ್ಯಾಯ ದೊರಕಿಸುವ ಪ್ರಕ್ರಿಯೆಯನ್ನು ಚುರುಕುಗೊಳಿಸಬೇಕು ಎಂದು ಒತ್ತಾಯಿಸಿದರು.

ಸರ್ಕಾರಿ ನೌಕರರಿಗೆ ಜಾರಿಯಲ್ಲಿರುವ ಹೊಸ ಪಿಂಚಣಿ ಯೋಜನೆ (ಎನ್‌ಪಿಎಸ್) ರದ್ದುಗೊಳಿಸಿ ಹಳೆಯ ಪಿಂಚಣಿ ಯೋಜನೆ (ಒಪಿಎಸ್) ಮರುಜಾರಿಗೊಳಿಸಬೇಕು. ಹಿಂದಿನ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಗೋಹತ್ಯೆ ನಿಷೇಧ ಕಾಯ್ದೆ-2020ನ್ನು ರದ್ದುಪಡಿಸಬೇಕು ಎಂಬ ಬೇಡಿಕೆಯನ್ನೂ ಮುಂದಿಟ್ಟರು.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ದಲಿತ ಸಂಘಟನೆಗಳ ಮುಖಂಡರ ಸಭೆಯನ್ನು ನಿಯಮಿತವಾಗಿ ಆಯೋಜಿಸಬೇಕು. ಪರಿಶಿಷ್ಟ ಸಮುದಾಯಗಳು ಎದುರಿಸುತ್ತಿರುವ ವಸತಿ, ಶಿಕ್ಷಣ, ಉದ್ಯೋಗ, ಭೂಮಿ, ಮೂಲಸೌಕರ್ಯ ಹಾಗೂ ಸಾಮಾಜಿಕ ಸುರಕ್ಷತೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಶೀಲಿಸಿ ಕಾಲಮಿತಿಯೊಳಗೆ ಪರಿಹಾರ ಒದಗಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಚಾಲಕ ಎಂ. ಗುರುಮೂರ್ತಿ, ರಾಜ್ಯ ಸಂಘಟನಾ ಸಂಚಾಲಕ ಹನುಮಂತಪ್ಪ ಕಾಕರಗಲ್, ರಾಜ್ಯ ಖಜಾಂಚಿ ಬಿ.ಎ. ಕಾಟ್ಟೆ, ರಾಯಚೂರು ವಿಭಾಗದ ಪದಾಧಿಕಾರಿಗಳು, ವಿವಿಧ ಜಿಲ್ಲೆಗಳ ರಾಜ್ಯ, ಜಿಲ್ಲಾ ಹಾಗೂ ವಿಭಾಗೀಯ ಮುಖಂಡರು ಮತ್ತು ದಲಿತ ಸಂಘಟನೆಗಳ ಕಾರ್ಯಕರ್ತರು ಭಾಗವಹಿಸಿದ್ದರು.

ತಿಡಿಗೋಳದಲ್ಲಿ ದಲಿತರ ಮೇಲೆ ದೌರ್ಜನ್ಯ ಆರೋಪ: ತಪ್ಪಿತಸ್ಥರ ಬಂಧನಕ್ಕೆ ಆಗ್ರಹಿಸಿ ನ.11ರಂದು ಬೃಹತ್ ಬೈಕ್ ರ್ಯಾಲಿ



ಸಿರವಾರ: ತಾಲೂಕಿನ ತಿಡಿಗೋಳ ಗ್ರಾಮದಲ್ಲಿ ಮಾರುತೇಶ್ವರ (ಆಂಜನೇಯ) ಜಾತ್ರೆಯ ಸಂದರ್ಭದಲ್ಲಿ ದಲಿತ ಸಮುದಾಯದವರ ಮೇಲೆ ಹಲ್ಲೆ ನಡೆಸಿ, ಸಾಮಾಜಿಕ ಬಹಿಷ್ಕಾರ ಹೇರಲಾಗಿದೆ ಎಂದು ಆರೋಪಿಸಿರುವ ದಲಿತ ಸಂಘಟನೆಗಳ ಮುಖಂಡರು, ಪ್ರಕರಣದಲ್ಲಿ ಭಾಗಿಯಾಗಿರುವ ಎಲ್ಲ ಆರೋಪಿಗಳನ್ನು ಕೂಡಲೇ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಪಟ್ಟಣದಲ್ಲಿ ಶುಕ್ರವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖಂಡರು, ಅಕ್ಟೋಬರ್ 18ರಂದು ತಿಡಿಗೋಳ ಗ್ರಾಮದಲ್ಲಿ ನಡೆದ ಮಾರುತೇಶ್ವರ ಜಾತ್ರೆಯ ಸಂದರ್ಭದಲ್ಲಿ ದಲಿತ ಯುವಕರ ಮೇಲೆ ಹಲ್ಲೆ ನಡೆಸಲಾಗಿದೆ. ಘಟನೆಯ ಬಳಿಕ ಗ್ರಾಮದಲ್ಲಿ ದಲಿತ ಸಮುದಾಯದವರು ಭಯದ ವಾತಾವರಣದಲ್ಲಿ ಜೀವನ ನಡೆಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು.

ಸ್ವಾತಂತ್ರ್ಯ ದೊರೆತು 79 ವರ್ಷಗಳು ಕಳೆದರೂ ಗ್ರಾಮೀಣ ಪ್ರದೇಶಗಳಲ್ಲಿ ಜಾತಿ ತಾರತಮ್ಯ ಹಾಗೂ ಅಸ್ಪೃಶ್ಯತೆಯಂತಹ ಅನಿಷ್ಟ ಪದ್ಧತಿಗಳು ಮುಂದುವರಿಯುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಸಂವಿಧಾನ ಎಲ್ಲ ನಾಗರಿಕರಿಗೂ ಸಮಾನ ಹಕ್ಕುಗಳನ್ನು ನೀಡಿದ್ದರೂ ಕೆಲವು ಕಡೆಗಳಲ್ಲಿ ದಲಿತರು ತಮ್ಮ ಹಕ್ಕುಗಳನ್ನು ಚಲಾಯಿಸಲು ಅಡ್ಡಿಪಡಿಸಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಜಾತ್ರೆಯ ಮೆರವಣಿಗೆಯಲ್ಲಿ ದಲಿತ ಯುವಕರು ಭಾಗವಹಿಸಿದ್ದಕ್ಕೆ ಕೆಲವರು ಆಕ್ಷೇಪ ವ್ಯಕ್ತಪಡಿಸಿದ್ದು, ಇದನ್ನು ಪ್ರಶ್ನಿಸಿದ ಹುಸೇನಪ್ಪ ಎಂಬುವವರ ಮೇಲೆ ಹಲ್ಲೆ ನಡೆಸಲಾಗಿದೆ. ಹಲ್ಲೆಯಿಂದ ತಪ್ಪಿಸಿಕೊಳ್ಳಲು ಹುಸೇನಪ್ಪ ದಲಿತರ ಕೇರಿಯತ್ತ ಓಡಿಹೋದಾಗ ಅವರನ್ನು ಬೆನ್ನಟ್ಟಿದ ಗುಂಪು ಮನೆಗಳ ಬಳಿಗೆ ತೆರಳಿ ದೌರ್ಜನ್ಯ ನಡೆಸಿದೆ ಎಂದು ಮುಖಂಡರು ದೂರಿದರು.

ಘಟನೆಯ ಸಂದರ್ಭದಲ್ಲಿ ಜಗಳವನ್ನು ತಡೆಯಲು ಮುಂದಾದ ಮಹಿಳೆಯರು ಹಾಗೂ ವೃದ್ಧರ ಮೇಲೆಯೂ ಹಲ್ಲೆ ನಡೆಸಲಾಗಿದೆ. ಅಲ್ಲದೆ, ಉಪನ್ಯಾಸಕ ತಾಯಪ್ಪ ಹಾಗೂ ಕೆಲವು ವಿದ್ಯಾರ್ಥಿಗಳ ಮೇಲೂ ದೌರ್ಜನ್ಯ ನಡೆದಿದೆ ಎಂದು ಆರೋಪಿಸಿದರು.

ಘಟನೆ ನಡೆದು ಎರಡು ವಾರಗಳಿಗೂ ಹೆಚ್ಚು ಸಮಯ ಕಳೆದಿದ್ದರೂ ಪ್ರಮುಖ ಆರೋಪಿಗಳನ್ನು ಬಂಧಿಸಿಲ್ಲ. ಕ್ಷೇತ್ರದ ಶಾಸಕ ಬಸನಗೌಡ ತುರುವಿಹಾಳ ಅವರು ಗ್ರಾಮಕ್ಕೆ ಭೇಟಿ ನೀಡಿ ಸಂತ್ರಸ್ತರ ಸಮಸ್ಯೆಗಳನ್ನು ಆಲಿಸಿಲ್ಲ ಎಂದು ಮುಖಂಡರು ಅಸಮಾಧಾನ ವ್ಯಕ್ತಪಡಿಸಿದರು.

ಗ್ರಾಮದಲ್ಲಿ ಉಂಟಾಗಿರುವ ಭಯದ ವಾತಾವರಣದಿಂದಾಗಿ ಕೆಲವು ದಲಿತ ಕುಟುಂಬಗಳ ಸದಸ್ಯರು ಊರು ತೊರೆದಿದ್ದಾರೆ. ಸಂತ್ರಸ್ತ ಕುಟುಂಬಗಳಿಗೆ ಸೂಕ್ತ ಪೊಲೀಸ್ ರಕ್ಷಣೆ ಒದಗಿಸಿ, ನಿರ್ಭಯವಾಗಿ ಗ್ರಾಮದಲ್ಲಿ ವಾಸಿಸಲು ಅನುಕೂಲ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ತಿಡಿಗೋಳ ಘಟನೆಯ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಬೇಕು. ಗ್ರಾಮದಲ್ಲಿ ಸಾಮಾಜಿಕ ಬಹಿಷ್ಕಾರ ಹೇರಿರುವ ಆರೋಪಗಳ ಬಗ್ಗೆಯೂ ಸಮಗ್ರ ಪರಿಶೀಲನೆ ನಡೆಸಬೇಕು. ಇದರೊಂದಿಗೆ ಸರ್ಕಾರಿ ಭೂಮಿ ಒತ್ತುವರಿ ಮಾಡಿರುವ ಆರೋಪಗಳ ಕುರಿತು ತನಿಖೆ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ದಲಿತ ಸಮುದಾಯದವರಿಗೆ ನ್ಯಾಯ ದೊರಕಿಸಿಕೊಡುವುದು ಹಾಗೂ ಘಟನೆಯ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ನವೆಂಬರ್ 11ರಂದು ಸಿಂಧನೂರಿನ ಪಿಡಬ್ಲ್ಯೂಡಿ ಕ್ಯಾಂಪ್‌ನ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ತಿಡಿಗೋಳ ಗ್ರಾಮದವರೆಗೆ ಬೃಹತ್ ಬೈಕ್ ರ್ಯಾಲಿ ಹಮ್ಮಿಕೊಳ್ಳಲಾಗಿದೆ. ಬಳಿಕ ತಿಡಿಗೋಳ ಗ್ರಾಮದಲ್ಲಿ ಬೆಳಿಗ್ಗೆ 11 ಗಂಟೆಗೆ ಬಹಿರಂಗ ಸಭೆ ನಡೆಸಲಾಗುವುದು ಎಂದು ತಿಳಿಸಿದರು.

ಪ್ರಕರಣದಲ್ಲಿ ಭಾಗಿಯಾಗಿರುವ ಆರೋಪಿಗಳ ವಿರುದ್ಧ ತ್ವರಿತ ಕ್ರಮ ಕೈಗೊಂಡು ಸಂತ್ರಸ್ತರಿಗೆ ನ್ಯಾಯ ಒದಗಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಮುಖಂಡರು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಬಹುಜನ ಸಮಾಜದ ಮುಖಂಡ ಬಸವರಾಜ ಭಂಡಾರಿ, ದಲಿತ ಮುಖಂಡರಾದ ಬಡ್ಡ ಹನುಮಂತ, ವಿಜಯರಾಣಿ, ಅರಳಪ್ಪ, ಸವಾರೆಪ್ಪ, ಶ್ಯಾಮುಲೆಪ್ಪ ನ್ಯಾಯಬೆಲೆ ಅಂಗಡಿ, ಮಲ್ಲಪ್ಪ, ಜಯಪ್ಪ, ಗ್ಯಾನಪ್ಪ, ಮಲ್ಲಪ್ಪ ನಾರಬಂಡಾ, ಎಂ. ಮನೋಹರ, ದಾನಪ್ಪ, ರಾಮಣ್ಣ ಮೇಸ್ತ್ರಿ, ಮೇಷಾಕ್ ಕೆಂಪು, ಯೇಸುಮಿತ್ರ, ಕರಿಯಪ್ಪ, ಮೌನೇಶ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರಂಗಭೂಮಿ ಉಳಿವಿಗೆ ಕಲಾಭಿಮಾನಿಗಳ ಬೆಂಬಲ ಅತ್ಯಗತ್ಯ: ವಿ.ಎನ್. ಅಕ್ಕಿ



ರಾಯಚೂರು: ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಹಾಗೂ ಜನರಲ್ಲಿ ವೈಚಾರಿಕ ಪ್ರಜ್ಞೆ ಮೂಡಿಸುವ ಶಕ್ತಿ ರಂಗಭೂಮಿಗಿದೆ. ಇಂತಹ ಅರ್ಥಪೂರ್ಣ ಕಲೆಯನ್ನು ಉಳಿಸಿ ಬೆಳೆಸಲು ಕಲಾವಿದರ ಪರಿಶ್ರಮದ ಜೊತೆಗೆ ಪ್ರೇಕ್ಷಕರು ಹಾಗೂ ಕಲಾಭಿಮಾನಿಗಳ ನಿರಂತರ ಸಹಕಾರ ಅಗತ್ಯವಾಗಿದೆ ಎಂದು ಹಿರಿಯ ರಂಗಭೂಮಿ ಕಲಾವಿದ ವಿ.ಎನ್. ಅಕ್ಕಿ ಅಭಿಪ್ರಾಯಪಟ್ಟರು.

ನಗರದಲ್ಲಿ ಕರ್ನಾಟಕ ನಾಟಕ ಅಕಾಡೆಮಿ ಬೆಂಗಳೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಯಚೂರು ಹಾಗೂ ರಂಗಸಿರಿ ಸಾಂಸ್ಕೃತಿಕ ಕಲಾ ಬಳಗದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಮೂರು ದಿನಗಳ ರಾಯಚೂರು ಜಿಲ್ಲಾ ನಾಟಕೋತ್ಸವದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಾಟಕೋತ್ಸವದ ಅಂಗವಾಗಿ ಪ್ರದರ್ಶನಗೊಂಡ ರಮಾಬಾಯಿ ಅಂಬೇಡ್ಕರ್, ಕಲ್ಯಾಣ ಕ್ರಾಂತಿಯ ಮುನ್ನುಡಿ ಹಾಗೂ ಶಿವಶರಣ ಕಂಬಳಿ ನಾಗಿದೇವ ನಾಟಕಗಳು ಐತಿಹಾಸಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಮಹತ್ವವನ್ನು ಹೊಂದಿವೆ. ಇಂತಹ ನಾಟಕಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಜನರು ವೀಕ್ಷಿಸಿದಾಗ ಮಾತ್ರ ಅವುಗಳಲ್ಲಿ ಅಡಕವಾಗಿರುವ ಮೌಲ್ಯಗಳು ಮತ್ತು ಸಂದೇಶಗಳು ಸಮಾಜದ ವಿವಿಧ ವರ್ಗಗಳಿಗೆ ತಲುಪಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ರಂಗಸಿರಿ ಸಾಂಸ್ಕೃತಿಕ ಕಲಾ ಬಳಗದ ಅಧ್ಯಕ್ಷ ರಂಗಸ್ವಾಮಿ ಅವರ ನೇತೃತ್ವದಲ್ಲಿ ಸಮಾಜಮುಖಿ ಚಿಂತನೆಗಳನ್ನು ಒಳಗೊಂಡ ನಾಟಕಗಳನ್ನು ಆಯೋಜಿಸಿರುವುದು ಪ್ರಶಂಸನೀಯ. ಪ್ರಸ್ತುತ ರಂಗಭೂಮಿ ಕಲಾವಿದರು ಆರ್ಥಿಕ ಹಾಗೂ ಸಾಮಾಜಿಕವಾಗಿ ಹಲವು ಸವಾಲುಗಳನ್ನು ಎದುರಿಸುತ್ತಿದ್ದಾರೆ. ಕಲಾವಿದರ ಪರಿಶ್ರಮಕ್ಕೆ ತಕ್ಕ ಮನ್ನಣೆ ಮತ್ತು ನೆರವು ದೊರೆಯದಿರುವುದು ವಿಷಾದನೀಯ. ಸಾರ್ವಜನಿಕರಲ್ಲಿ ರಂಗಕಲೆಯ ಬಗ್ಗೆ ಆಸಕ್ತಿ ಕಡಿಮೆಯಾಗುತ್ತಿರುವುದು ಕೂಡ ಕಳವಳಕಾರಿ ಬೆಳವಣಿಗೆಯಾಗಿದೆ ಎಂದರು.

ರಂಗಭೂಮಿ ಕೇವಲ ಮನರಂಜನೆಯ ಮಾಧ್ಯಮವಲ್ಲ, ಸಮಾಜಕ್ಕೆ ಉತ್ತಮ ವಿಚಾರಗಳನ್ನು ಪರಿಚಯಿಸುವ ಪರಿಣಾಮಕಾರಿ ವೇದಿಕೆಯಾಗಿದೆ. ಕಲಾವಿದರ ಬದುಕಿಗೆ ಭದ್ರತೆ ಒದಗಿಸುವುದರ ಜೊತೆಗೆ ರಂಗಪ್ರದರ್ಶನಗಳಿಗೆ ಹೆಚ್ಚಿನ ಪ್ರೇಕ್ಷಕರನ್ನು ಆಕರ್ಷಿಸುವ ಪ್ರಯತ್ನ ನಡೆಯಬೇಕು. ಕಲಾವಿದರು ಮತ್ತು ಕಲಾಭಿಮಾನಿಗಳು ಪರಸ್ಪರ ಸಹಕಾರದಿಂದ ಕಾರ್ಯನಿರ್ವಹಿಸಿದಾಗ ಮಾತ್ರ ರಂಗಭೂಮಿಯ ಪರಂಪರೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯಲು ಸಾಧ್ಯ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಅಶೋಕ್ ಜೈನ್ ಮಾತನಾಡಿ, ರಾಯಚೂರು ಜಿಲ್ಲೆಯ ಅನೇಕ ಕಲಾವಿದರು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿ ಜಿಲ್ಲೆಗೆ ಗೌರವ ತಂದಿದ್ದಾರೆ. ಆದರೆ ರಂಗಭೂಮಿ ಕ್ಷೇತ್ರದಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿದ ಕಲಾವಿದರನ್ನು ರಾಜ್ಯೋತ್ಸವ ಪ್ರಶಸ್ತಿಗೆ ಪರಿಗಣಿಸುವಲ್ಲಿ ತಾರತಮ್ಯ ನಡೆಯುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅರ್ಹ ರಂಗಭೂಮಿ ಕಲಾವಿದರಿಗೆ ಸರ್ಕಾರದಿಂದ ಸೂಕ್ತ ಗೌರವ, ಪ್ರಶಸ್ತಿ ಹಾಗೂ ಸೌಲಭ್ಯಗಳು ದೊರೆಯುವಂತೆ ಒಗ್ಗಟ್ಟಿನಿಂದ ಮನವಿ ಸಲ್ಲಿಸಲಾಗುವುದು. ಕಲಾವಿದರಿಗೆ ಕೇವಲ ಮಾತಿನ ಪ್ರೋತ್ಸಾಹ ನೀಡುವುದಕ್ಕಿಂತ ಅವರ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಆರ್ಥಿಕ ಹಾಗೂ ನೈತಿಕ ಬೆಂಬಲ ನೀಡುವುದು ಮುಖ್ಯವಾಗಿದೆ ಎಂದು ಕರೆ ನೀಡಿದರು.

ವಕೀಲ ಜಗದೀಶ್ ಮಾತನಾಡಿ, ರಂಗಸಿರಿ ಸೇರಿದಂತೆ ಜಿಲ್ಲೆಯ ವಿವಿಧ ಸಾಂಸ್ಕೃತಿಕ ಸಂಘಟನೆಗಳು ಸಂಗೀತ, ನೃತ್ಯ, ನಾಟಕ ಹಾಗೂ ಜನಪದ ಕಲೆಗಳ ಬೆಳವಣಿಗೆಗೆ ಶ್ರಮಿಸುತ್ತಿವೆ. ಹೊಸ ಪ್ರತಿಭೆಗಳನ್ನು ಗುರುತಿಸಿ ಅವರಿಗೆ ವೇದಿಕೆ ಕಲ್ಪಿಸುವ ಕೆಲಸವೂ ನಡೆಯುತ್ತಿದೆ. ಇಂತಹ ಸಂಘಟನೆಗಳ ಚಟುವಟಿಕೆಗಳಿಗೆ ವಿದ್ಯಾವಂತರು, ಸಾಹಿತಿಗಳು, ಬುದ್ಧಿಜೀವಿಗಳು, ಜನಪ್ರತಿನಿಧಿಗಳು ಹಾಗೂ ಸಮಾಜದ ಮುಖಂಡರು ಕೈಜೋಡಿಸಬೇಕು. ಸ್ಥಳೀಯ ಕಲಾವಿದರಿಗೆ ಹೆಚ್ಚಿನ ಅವಕಾಶಗಳು ದೊರೆತಾಗ ಜಿಲ್ಲೆಯ ಸಾಂಸ್ಕೃತಿಕ ಕ್ಷೇತ್ರ ಮತ್ತಷ್ಟು ಸಮೃದ್ಧವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಯಚೂರು ಅಧ್ಯಕ್ಷ ಚಂದ್ರಶೇಖರ ಪಾಟೀಲ್ ಮಿರ್ಜಾಪುರ ಮಾತನಾಡಿ, ರಾಯಚೂರು ಜಿಲ್ಲೆ ಶಿಕ್ಷಣ, ರಾಜಕೀಯ, ಸಾಹಿತ್ಯ, ಕಲೆ ಮತ್ತು ಸಂಸ್ಕೃತಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ವಿಶಿಷ್ಟ ಸಾಧನೆ ಮಾಡಿದೆ. ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಅಪಾರ ಕಲಾಪ್ರತಿಭೆಗಳಿದ್ದರೂ ಸೂಕ್ತ ಅವಕಾಶ ಹಾಗೂ ಪ್ರೋತ್ಸಾಹದ ಕೊರತೆಯಿಂದ ಅನೇಕರು ತಮ್ಮ ಪ್ರತಿಭೆಯನ್ನು ವಿಶಾಲ ವೇದಿಕೆಯಲ್ಲಿ ಪ್ರದರ್ಶಿಸಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು.

ಗ್ರಾಮೀಣ ಕಲಾವಿದರನ್ನು ಗುರುತಿಸಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಬೆಳೆಯಲು ಅಗತ್ಯ ನೆರವು ಕಲ್ಪಿಸಬೇಕು. ರಂಗಸಿರಿ ಸಂಸ್ಥೆಯ ಅಧ್ಯಕ್ಷ ರಂಗಸ್ವಾಮಿ ಅವರು ಮೂರು ದಿನಗಳ ಕಾಲ ವೈಚಾರಿಕ ಮತ್ತು ಸಾಮಾಜಿಕ ಸಂದೇಶಗಳನ್ನು ಒಳಗೊಂಡ ನಾಟಕಗಳನ್ನು ಪ್ರದರ್ಶಿಸುವ ಮೂಲಕ ಉತ್ತಮ ಸಾಂಸ್ಕೃತಿಕ ವಾತಾವರಣ ನಿರ್ಮಿಸಿದ್ದಾರೆ. ಮುಂದಿನ ದಿನಗಳಲ್ಲಿಯೂ ನಾಟಕ, ನೃತ್ಯ, ಜನಪದ ಹಾಗೂ ಸಾಹಿತ್ಯಕ್ಕೆ ಸಂಬಂಧಿಸಿದ ಕಾರ್ಯಕ್ರಮಗಳನ್ನು ನಿರಂತರವಾಗಿ ಆಯೋಜಿಸಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಗಿಲ್ಲೆಸುಗೂರು ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ನಾಗೇಂದ್ರಪ್ಪ ಮಟಮಾರಿ, ಕರ್ನಾಟಕ ರಾಜ್ಯ ಮೀನುಗಾರಿಕೆ ಮಹಾಮಂಡಳಿ ಮೈಸೂರು ನಿರ್ದೇಶಕ ಸೈಯದ್ ಅಲಿ ಮನ್ಸಾಲಾಪುರ, ಕಲಾಪೋಷಕ ವಿಶ್ವನಾಥ ಪಾಟೀಲ್ ಆಲ್ಕೂರು, ಮಂದಾರ ಪತ್ತಿನ ಸಹಕಾರ ಬ್ಯಾಂಕ್ ಅಧ್ಯಕ್ಷ ಬಸವರಾಜ ದೊರೆ, ಈಶ್ವರ ಪ್ರಿಂಟರ್ಸ್ ಮಾಲೀಕ ರಾಮಲಿಂಗಪ್ಪ ಚಂದನಕೇರಿ, ಹಿರಿಯ ರಂಗಭೂಮಿ ಕಲಾವಿದ ಕೆ. ಬಸವಲಿಂಗಪ್ಪ ಹಾಗೂ ರಂಗಭೂಮಿ ಕಲಾವಿದ ಎಚ್. ಮಹದೇವ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಸಮಾರೋಪ ಸಮಾರಂಭದ ಬಳಿಕ ರಾಯಚೂರಿನ ರಂಗ ಕಲಾವಿದರ ತಂಡದಿಂದ ಭಕ್ತಿಪ್ರಧಾನ ಶಿವಶರಣ ಕಂಬಳಿ ನಾಗಿದೇವ ನಾಟಕ ಪ್ರದರ್ಶನಗೊಂಡಿತು. ಕಲಾವಿದರ ಅಭಿನಯದ ಮೂಲಕ ಶರಣ ಪರಂಪರೆಯ ಮೌಲ್ಯಗಳು ಹಾಗೂ ಭಕ್ತಿಯ ಸಂದೇಶವನ್ನು ಪ್ರೇಕ್ಷಕರಿಗೆ ಪರಿಚಯಿಸಲಾಯಿತು. ಇದರೊಂದಿಗೆ ಮೂರು ದಿನಗಳ ರಾಯಚೂರು ಜಿಲ್ಲಾ ನಾಟಕೋತ್ಸವಕ್ಕೆ ತೆರೆಬಿದ್ದಿತು.

ಗಬ್ಬೂರು ಪಿಯು ಕಾಲೇಜಿನ ಉಪನ್ಯಾಸಕರ ನಿಯೋಜನೆ ರದ್ದತಿಗೆ ಆಗ್ರಹ: ನ.13ರೊಳಗೆ ಕ್ರಮ ಕೈಗೊಳ್ಳದಿದ್ದರೆ ಹೋರಾಟ



ರಾಯಚೂರು: ದೇವದುರ್ಗ ತಾಲೂಕಿನ ಗಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸಮಾಜಶಾಸ್ತ್ರ ಹಾಗೂ ಅರ್ಥಶಾಸ್ತ್ರ ಉಪನ್ಯಾಸಕರನ್ನು ವಾರದಲ್ಲಿ ಮೂರು ದಿನ ಬೇರೆ ಕಾಲೇಜುಗಳಿಗೆ ನಿಯೋಜಿಸಿರುವ ಆದೇಶವನ್ನು ಕೂಡಲೇ ಹಿಂಪಡೆಯಬೇಕು ಎಂದು ಮಾನವ ಹಕ್ಕುಗಳ ರಕ್ಷಣೆ ಹಾಗೂ ಭ್ರಷ್ಟಾಚಾರ ನಿರ್ಮೂಲನಾ ಸೇವಾ ಸಮಿತಿಯ ಜಿಲ್ಲಾ ಯುವ ಘಟಕದ ಅಧ್ಯಕ್ಷ ಅಲ್ಲಾವಲಿ ಗಬ್ಬೂರು ಒತ್ತಾಯಿಸಿದರು.

ಈ ಕುರಿತು ಅಪರ ಜಿಲ್ಲಾಧಿಕಾರಿ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಪ್ರತ್ಯೇಕ ಮನವಿ ಸಲ್ಲಿಸಿದ ಅವರು, ಉಪನ್ಯಾಸಕರ ನಿಯೋಜನೆಯಿಂದ ಗ್ರಾಮೀಣ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೀವ್ರ ಅಡಚಣೆಯಾಗುತ್ತಿದೆ ಎಂದು ಗಮನ ಸೆಳೆದರು.

ಗಬ್ಬೂರು ಹೋಬಳಿ ಕೇಂದ್ರದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜು ಕಳೆದ ಮೂರು ದಶಕಗಳಿಂದ ಗ್ರಾಮೀಣ ಭಾಗದ ಬಡ ಹಾಗೂ ಹಿಂದುಳಿದ ಕುಟುಂಬಗಳ ವಿದ್ಯಾರ್ಥಿಗಳಿಗೆ ಶಿಕ್ಷಣ ಒದಗಿಸುತ್ತಿದೆ. ಈಗಾಗಲೇ ಉಪನ್ಯಾಸಕರ ಕೊರತೆ ಎದುರಿಸುತ್ತಿರುವ ಕಾಲೇಜಿನಿಂದ ಇಬ್ಬರು ಉಪನ್ಯಾಸಕರನ್ನು ಬೇರೆಡೆ ನಿಯೋಜಿಸಿರುವುದು ವಿದ್ಯಾರ್ಥಿಗಳ ಕಲಿಕೆಗೆ ಹಿನ್ನಡೆಯಾಗಿದೆ ಎಂದು ದೂರಿದರು.

ಕಾಲೇಜಿನಲ್ಲಿ ನಾಲ್ವರು ಖಾಯಂ ಹಾಗೂ ಇಬ್ಬರು ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದಾರೆ. ಸಮಾಜಶಾಸ್ತ್ರ ಉಪನ್ಯಾಸಕ ಮಲ್ಲಿಕಾರ್ಜುನ ಮತ್ತು ಅರ್ಥಶಾಸ್ತ್ರ ಉಪನ್ಯಾಸಕ ಮಲ್ಲಪ್ಪ ಅವರನ್ನು ವಾರದಲ್ಲಿ ಮೂರು ದಿನ ಇತರ ಕಾಲೇಜುಗಳಿಗೆ ನಿಯೋಜಿಸಿರುವುದರಿಂದ ಪಠ್ಯಕ್ರಮ ಪೂರ್ಣಗೊಳಿಸಲು ತೊಂದರೆಯಾಗುತ್ತಿದೆ ಎಂದು ತಿಳಿಸಿದರು.

ಕಾಲೇಜಿನಲ್ಲಿ ಪ್ರಥಮ ಪಿಯುಸಿಯ 77 ಹಾಗೂ ದ್ವಿತೀಯ ಪಿಯುಸಿಯ 51 ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 128 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಪರೀಕ್ಷೆಗಳು ಸಮೀಪಿಸುತ್ತಿರುವ ಸಂದರ್ಭದಲ್ಲಿ ಪ್ರಮುಖ ವಿಷಯಗಳ ಬೋಧನೆಗೆ ಅಡ್ಡಿಯಾಗುತ್ತಿರುವುದು ವಿದ್ಯಾರ್ಥಿಗಳು ಹಾಗೂ ಪಾಲಕರಲ್ಲಿ ಆತಂಕ ಮೂಡಿಸಿದೆ ಎಂದು ಹೇಳಿದರು.

ಇಬ್ಬರು ಉಪನ್ಯಾಸಕರ ನಿಯೋಜನೆ ರದ್ದುಗೊಳಿಸಿ ಪೂರ್ಣಾವಧಿಗೆ ಗಬ್ಬೂರು ಕಾಲೇಜಿನಲ್ಲಿಯೇ ಸೇವೆ ಸಲ್ಲಿಸುವಂತೆ ಕ್ರಮ ಕೈಗೊಳ್ಳಬೇಕು. ಇತರ ಕಾಲೇಜುಗಳ ಅಗತ್ಯಕ್ಕೆ ಪರ್ಯಾಯ ಅತಿಥಿ ಉಪನ್ಯಾಸಕರನ್ನು ನೇಮಿಸಬೇಕು. ಬಾಕಿ ಉಳಿದಿರುವ ಪಠ್ಯಕ್ರಮ ಪೂರ್ಣಗೊಳಿಸಲು ವಿಶೇಷ ತರಗತಿಗಳನ್ನು ಆಯೋಜಿಸಬೇಕು ಎಂದು ಆಗ್ರಹಿಸಿದರು.

ನವೆಂಬರ್ 13ರೊಳಗೆ ಸಮಸ್ಯೆಗೆ ಪರಿಹಾರ ಕಲ್ಪಿಸದಿದ್ದರೆ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಾರ್ವಜನಿಕರ ಸಹಕಾರದೊಂದಿಗೆ ಶಾಂತಿಯುತ ಪ್ರತಿಭಟನೆ, ರಸ್ತೆ ತಡೆ ಸೇರಿದಂತೆ ಪ್ರಜಾಸತ್ತಾತ್ಮಕ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಅಲ್ಲಾವಲಿ ಗಬ್ಬೂರು ಎಚ್ಚರಿಸಿದರು.

ಎಸ್‌ಐಆರ್ ಪ್ರಕ್ರಿಯೆ ವಿರೋಧಿಸುವ ಕಾಂಗ್ರೆಸ್ ವಿರುದ್ಧ ಬಿಜೆಪಿ ಜನಜಾಗೃತಿ ಪಾದಯಾತ್ರೆ: ಶಾಸಕ ಡಾ. ಶಿವರಾಜ ಪಾಟೀಲ ಭಾಗಿ

ರಾಯಚೂರು: ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆ)ರ್ ಪ್ರಕ್ರಿಯೆಯನ್ನು ವಿರೋಧಿಸುತ್ತಿರುವ ಕಾಂಗ್ರೆಸ್ ಪಕ್ಷ ಹಾಗೂ ರಾಜ್ಯ ಸರ್ಕಾರದ ನಿಲುವಿನ ವಿರುದ್ಧ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಭಾರತೀಯ ಜನತಾ ಪಕ್ಷದ ವತಿಯಿಂದ ಬೃಹತ್ ಪ್ರತಿಭಟನಾ ಪಾದಯಾತ್ರೆ ಹಮ್ಮಿಕೊಳ್ಳಲಾಯಿತು.

ರಾಯಚೂರು, ಬಳ್ಳಾರಿ, ಕೊಪ್ಪಳ ಹಾಗೂ ವಿಜಯನಗರ ಜಿಲ್ಲೆಗಳ ಬಿಜೆಪಿ ಮುಖಂಡರು, ಶಾಸಕರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದ ಪಾದಯಾತ್ರೆಯಲ್ಲಿ ರಾಯಚೂರು ನಗರ ಶಾಸಕ ಡಾ. ಶಿವರಾಜ ಪಾಟೀಲ ಪಾಲ್ಗೊಂಡು ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಮತದಾರರ ಪಟ್ಟಿಯ ನಿಖರತೆ ಹಾಗೂ ಪಾರದರ್ಶಕತೆಯನ್ನು ಕಾಪಾಡುವುದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅತ್ಯಂತ ಮಹತ್ವದ್ದಾಗಿದೆ. ಅರ್ಹ ಮತದಾರರ ಹೆಸರುಗಳು ಪಟ್ಟಿಯಲ್ಲಿ ಉಳಿಯುವಂತೆ ಹಾಗೂ ಅನರ್ಹ ಮತ್ತು ನಕಲಿ ಮತದಾರರ ಹೆಸರುಗಳಿದ್ದರೆ ಅವುಗಳನ್ನು ನಿಯಮಾನುಸಾರ ಪರಿಶೀಲಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಭಿಪ್ರಾಯಪಟ್ಟರು.



ಎಸ್‌ಐಆರ್ ಪ್ರಕ್ರಿಯೆಯನ್ನು ಕಾಂಗ್ರೆಸ್ ಪಕ್ಷ ಹಾಗೂ ರಾಜ್ಯ ಸರ್ಕಾರ ವಿರೋಧಿಸುತ್ತಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಅವರು, ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಸಾರ್ವಜನಿಕರಲ್ಲಿ ಅನಗತ್ಯ ಗೊಂದಲ ಸೃಷ್ಟಿಸಬಾರದು. ಚುನಾವಣಾ ಪ್ರಕ್ರಿಯೆಯ ವಿಶ್ವಾಸಾರ್ಹತೆ ಕಾಪಾಡಲು ಪಾರದರ್ಶಕ ಪರಿಶೀಲನೆ ಅಗತ್ಯವಾಗಿದೆ ಎಂದು ಪ್ರತಿಪಾದಿಸಿದರು.

ಮತದಾರರ ಪಟ್ಟಿಯ ಪರಿಷ್ಕರಣೆ ಸಂದರ್ಭದಲ್ಲಿ ಯಾವುದೇ ಅರ್ಹ ಮತದಾರರ ಹಕ್ಕುಗಳಿಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಬೇಕು. ಪ್ರಜಾಪ್ರಭುತ್ವದ ಮೌಲ್ಯಗಳನ್ನು ರಕ್ಷಿಸುವುದು ಎಲ್ಲ ರಾಜಕೀಯ ಪಕ್ಷಗಳ ಹಾಗೂ ನಾಗರಿಕರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಪಾದಯಾತ್ರೆಯಲ್ಲಿ ನಾಲ್ಕು ಜಿಲ್ಲೆಗಳ ವಿವಿಧ ತಾಲೂಕುಗಳ ಬಿಜೆಪಿ ಶಾಸಕರು, ಪಕ್ಷದ ಹಿರಿಯ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು. ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ಪಕ್ಷದ ನಿಲುವನ್ನು ಸಾರ್ವಜನಿಕರಿಗೆ ತಿಳಿಸುವ ಮೂಲಕ ಜನಜಾಗೃತಿ ಮೂಡಿಸಲಾಯಿತು.

ನ.7ರಂದು ಗಬ್ಬೂರಿನಲ್ಲಿ ಬಾಗಿಲಿಗೆ ಬಂತು ಸರ್ಕಾರ ಜನಸೇವಾ ಕಾರ್ಯಕ್ರಮ: ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ



ದೇವದುರ್ಗ: ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತ ಪರಿಹಾರ ಕಲ್ಪಿಸುವ ಹಾಗೂ ಸರ್ಕಾರದ ವಿವಿಧ ಇಲಾಖೆಗಳ ಸೇವೆಗಳನ್ನು ಜನರ ಮನೆಬಾಗಿಲಿಗೆ ತಲುಪಿಸುವ ಉದ್ದೇಶದಿಂದ ನವೆಂಬರ್ 7ರಂದು ತಾಲೂಕಿನ ಗಬ್ಬೂರು ಗ್ರಾಮದಲ್ಲಿ ಪ್ರಜಾಸೇವೆ ಆಂದೋಲನ ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ದೇವದುರ್ಗ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ ತಿಳಿಸಿದ್ದಾರೆ.

ರಾಜ್ಯ ಸರ್ಕಾರದ ನಿರ್ದೇಶನದಂತೆ ಗಬ್ಬೂರು ಹೋಬಳಿಯ ಗಬ್ಬೂರು ಗ್ರಾಮದ ನಾಡಕಚೇರಿ ಆವರಣದಲ್ಲಿ ಶನಿವಾರ ಬೆಳಿಗ್ಗೆ 10 ಗಂಟೆಯಿಂದ ಕಾರ್ಯಕ್ರಮ ನಡೆಯಲಿದ್ದು, ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ಸಂಬಂಧಪಟ್ಟ ಇಲಾಖೆಗಳ ಮೂಲಕ ಸಮಸ್ಯೆಗಳ ಪರಿಶೀಲನೆ ಹಾಗೂ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಸಾಧ್ಯವಿರುವ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಸ್ಪಂದಿಸುವ ಮೂಲಕ ಸಾರ್ವಜನಿಕರು ಸರ್ಕಾರಿ ಕಚೇರಿಗಳಿಗೆ ಪದೇಪದೇ ಅಲೆದಾಡುವುದನ್ನು ತಪ್ಪಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

ಸಾರ್ವಜನಿಕರು ತಮ್ಮ ಸಮಸ್ಯೆಗಳು, ಕುಂದುಕೊರತೆಗಳು ಹಾಗೂ ವಿವಿಧ ಇಲಾಖೆಗಳ ಸೇವೆಗಳಿಗೆ ಸಂಬಂಧಿಸಿದ ಬೇಡಿಕೆಗಳನ್ನು ಸ್ಪಷ್ಟವಾಗಿ ನಮೂದಿಸಿ ಲಿಖಿತ ಅರ್ಜಿಗಳ ರೂಪದಲ್ಲಿ ಸಲ್ಲಿಸಬೇಕು. ಇದರಿಂದ ಸಂಬಂಧಪಟ್ಟ ಅಧಿಕಾರಿಗಳು ಅಹವಾಲುಗಳನ್ನು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲು ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

ಗಬ್ಬೂರು ಹೋಬಳಿ ವ್ಯಾಪ್ತಿಯ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತರುವ ಮೂಲಕ ಸರ್ಕಾರದ ಈ ಜನಸ್ನೇಹಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ವಚನ ಸಾಹಿತ್ಯ ಸಾಮಾಜಿಕ ಸಮಾನತೆ ಮತ್ತು ವೈಚಾರಿಕ ಜಾಗೃತಿಯ ಪ್ರತೀಕ: ಪ್ರೊ. ದೊಡ್ಡಬಸಪ್ಪ ಹುಡೇದಗಡ್ಡಿ



ರಾಯಚೂರು, ನ.5: ಹನ್ನೆರಡನೇ ಶತಮಾನದ ವಚನ ಸಾಹಿತ್ಯವು ಕೇವಲ ಧಾರ್ಮಿಕ ಚಳವಳಿಗೆ ಸೀಮಿತವಾಗದೆ, ಸಮಾಜದಲ್ಲಿದ್ದ ಮೂಢನಂಬಿಕೆ, ಜಾತೀಯತೆ, ಅಸಮಾನತೆ ಹಾಗೂ ಲಿಂಗಭೇದದ ವಿರುದ್ಧ ಜನಜಾಗೃತಿ ಮೂಡಿಸಿದ ಮಹತ್ವದ ವೈಚಾರಿಕ ಕ್ರಾಂತಿಯಾಗಿದೆ ಎಂದು ಲಿಂಗಸುಗೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ಪ್ರೊ. ದೊಡ್ಡಬಸಪ್ಪ ಸಿದ್ದನಗೌಡ ಹುಡೇದಗಡ್ಡಿ ಅಭಿಪ್ರಾಯಪಟ್ಟರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಕನ್ನಡ ವಿಭಾಗ ಹಾಗೂ ಆಂತರಿಕ ಗುಣಮಟ್ಟ ಭರವಸೆ ಕೋಶ (ಐಕ್ಯೂಎಸಿ) ಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ ವಚನಗಳಲ್ಲಿ ವೈಚಾರಿಕತೆ ಹಾಗೂ ಸಾಮಾಜಿಕ ಪ್ರಜ್ಞೆ ವಿಷಯದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಚನಕಾರರು ಸಮಾಜದಲ್ಲಿ ಬೇರೂರಿದ್ದ ಮೇಲು-ಕೀಳು, ಜಾತಿ-ವರ್ಗ ಹಾಗೂ ಸ್ತ್ರೀ-ಪುರುಷ ತಾರತಮ್ಯವನ್ನು ಖಂಡಿಸಿ ಮಾನವೀಯ ಮೌಲ್ಯಗಳಿಗೆ ಆದ್ಯತೆ ನೀಡಿದರು. ಮಾದಾರ ಚೆನ್ನಯ್ಯ, ಡೋಹರ ಕಕ್ಕಯ್ಯ ಸೇರಿದಂತೆ ಶೋಷಿತ ಸಮುದಾಯಗಳಿಂದ ಬಂದ ಶರಣರಿಗೂ ವಚನ ರಚನೆಯಲ್ಲಿ ಅವಕಾಶ ಕಲ್ಪಿಸುವ ಮೂಲಕ ಸಮಾನತೆಯ ಆಶಯವನ್ನು ಬಲಪಡಿಸಿದರು. ಕಾಯಕ ಮತ್ತು ದಾಸೋಹ ತತ್ವಗಳ ಮೂಲಕ ಶ್ರಮದ ಗೌರವ, ಸಾಮಾಜಿಕ ನ್ಯಾಯ ಹಾಗೂ ಪರಸ್ಪರ ಸಹಕಾರದ ಮಹತ್ವವನ್ನು ಸಾರಿದರು ಎಂದು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲೆ ಡಾ. ಸುಗುಣ ಬಸವರಾಜ ಮಾತನಾಡಿ, ಸಾಮಾನ್ಯ ಜನರಿಗೂ ಅರ್ಥವಾಗುವ ಸರಳ ಭಾಷೆಯಲ್ಲಿ ರಚನೆಯಾದ ವಚನಗಳು ಸಮಾನತೆ, ದಯೆ ಮತ್ತು ಮಾನವೀಯತೆಯ ಸಂದೇಶವನ್ನು ಸಾರುತ್ತವೆ. ವಿದ್ಯಾರ್ಥಿನಿಯರು ಶರಣರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಐಕ್ಯೂಎಸಿ ಸಂಯೋಜಕಿ ಹಾಗೂ ಭೌತಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ. ಜ್ಯೋತಿ ಸಿ.ಕೆ. ಪ್ರಾಸ್ತಾವಿಕವಾಗಿ ಮಾತನಾಡಿ, ಹನ್ನೆರಡನೇ ಶತಮಾನದಲ್ಲಿಯೇ ಮಹಿಳೆಯರಿಗೆ ಅಭಿವ್ಯಕ್ತಿ ಮತ್ತು ಸಮಾನ ಅವಕಾಶಗಳನ್ನು ಕಲ್ಪಿಸಿದ ವಚನ ಚಳವಳಿ ಮಹಿಳಾ ಸಬಲೀಕರಣಕ್ಕೆ ಮಹತ್ವದ ಕೊಡುಗೆ ನೀಡಿದೆ. ವಿದ್ಯಾರ್ಥಿನಿಯರು ವಚನ ಸಾಹಿತ್ಯದ ಆಶಯಗಳನ್ನು ಅರಿತು ಸಮಾಜದ ಮುಖ್ಯವಾಹಿನಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದರು.

ಕನ್ನಡ ವಿಭಾಗದ ಮುಖ್ಯಸ್ಥ ಡಾ. ಚನ್ನಬಸವ ವಿಶೇಷ ಉಪನ್ಯಾಸಕರನ್ನು ಪರಿಚಯಿಸಿದರು.

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಹ ಸಂಯೋಜಕ ಶರಣೆಗೌಡ, ಪ್ರಾಧ್ಯಾಪಕರಾದ ಡಾ. ಸಯ್ಯದ ರಶೀದ ಪರ್ವೀನ್, ರಂಗನಾಥ ಬಿಲ್ಲಾರ್, ಡಾ. ಸ್ವರೂಪರಾಣಿ, ಡಾ. ಉಮಾದೇವಿ, ಸುಮಿತ್ರಾ ಪ್ಯಾಟಿ, ಡಾ. ಸಂತೋಷ ರೇವೂರ, ಸರಸ್ವತಿ ಕೆ., ಡಾ. ಅಸ್ಮಾ, ದೈಹಿಕ ಶಿಕ್ಷಣ ನಿರ್ದೇಶಕ ಡಾ. ಪ್ರಸನ್ನಕುಮಾರ್, ಗ್ರಂಥಪಾಲಕ ಡಾ. ಸುರೇಶ ಶರಣಪ್ಪ ಸೇರಿದಂತೆ ಬೋಧಕ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ವಿದ್ಯಾರ್ಥಿನಿ ಸಂಜನಾ ಪ್ರಾರ್ಥಿಸಿದರು. ಡಾ. ಪುಷ್ಪಾವತಿ ಸ್ವಾಗತಿಸಿದರು. ಡಾ. ಅಳ್ಳಪ್ಪ ನಿರೂಪಿಸಿದರು. ಡಾ. ಪ್ರಕಾಶ ಬುದ್ದಿನ್ನಿ ವಂದಿಸಿದರು.

ವಕ್ಫ್ ಆಸ್ತಿಗೆ ನಕಲಿ ದಾಖಲೆ ಸೃಷ್ಟಿಸಿ ಖಾಸಗಿ ಶಿಕ್ಷಣ ಸಂಸ್ಥೆಗೆ ಮಾರಾಟ ಆರೋಪ: ಅಕ್ಬರ್ ಹುಸೇನ್ ನಾಗುಂಡಿ



ರಾಯಚೂರು: ನಗರದ ಜಹೀರಾಬಾದ್ ಕಾಲೋನಿಯಲ್ಲಿರುವ ನೂರ್ ಷಾ ದರ್ಗಾಕ್ಕೆ ಸಂಬಂಧಿಸಿದ ವಕ್ಫ್ ಆಸ್ತಿಯ 1.11 ಎಕರೆ ಜಮೀನನ್ನು ನಕಲಿ ದಾಖಲೆಗಳ ಮೂಲಕ ಖಾಸಗಿ ಶಿಕ್ಷಣ ಸಂಸ್ಥೆಗೆ ಮಾರಾಟ ಮಾಡಲಾಗಿದೆ ಎಂದು ರಾಯಚೂರು ವಕ್ಫ್ ರಕ್ಷಣಾ ಸಮಿತಿಯ ಅಕ್ಬರ್ ಹುಸೇನ್ ನಾಗುಂಡಿ ಗಂಭೀರ ಆರೋಪ ಮಾಡಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಕ್ಫ್ ಆಸ್ತಿಯಾಗಿ ಗುರುತಿಸಲ್ಪಟ್ಟಿರುವ ಜಮೀನನ್ನು ಅಕ್ರಮವಾಗಿ ಪರಭಾರೆ ಮಾಡಿರುವ ಬಗ್ಗೆ ಸಮಗ್ರ ತನಿಖೆ ನಡೆಸಬೇಕು. ಈ ವ್ಯವಹಾರದಲ್ಲಿ ಭಾಗಿಯಾಗಿರುವ ವ್ಯಕ್ತಿಗಳು ಹಾಗೂ ನೋಂದಣಿ ಪ್ರಕ್ರಿಯೆಗೆ ಸಹಕರಿಸಿದ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.

ಜಹೀರಾಬಾದ್ ಕಾಲೋನಿಯಲ್ಲಿರುವ ನೂರ್ ಷಾ ದರ್ಗಾಕ್ಕೆ ಸೇರಿದ ಜಮೀನನ್ನು 1980ರಲ್ಲಿಯೇ ವಕ್ಫ್ ಆಸ್ತಿ ಎಂದು ಅಧಿಕೃತ ಗೆಜೆಟ್‌ನಲ್ಲಿ ಪ್ರಕಟಿಸಲಾಗಿದೆ. ಹೀಗಿದ್ದರೂ ಕೆಲವರು ದಾಖಲೆಗಳನ್ನು ತಿರುಚಿ ಅಲ್ ಕರೀಂ ಶಿಕ್ಷಣ ಸಂಸ್ಥೆಗೆ ಜಮೀನು ಮಾರಾಟ ಮಾಡಿದ್ದಾರೆ. ವಕ್ಫ್ ಆಸ್ತಿಯ ಕಾನೂನುಬದ್ಧ ಸ್ವರೂಪವನ್ನು ಪರಿಶೀಲಿಸದೆ ಖಾಸಗಿ ಸಂಸ್ಥೆಯ ಹೆಸರಿಗೆ ನೋಂದಣಿ ಮಾಡಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ ಎಂದು ದೂರಿದರು.

ವಿವಾದಿತ ಜಮೀನಿನ ಸಮೀಪ ಮಸೀದಿ, ಶಾದಿಮಹಲ್, ಮದರಸಾ ಹಾಗೂ ನೂರ್ ಷಾ ಖಾದ್ರಿ ಅವರ ಗೋರಿ ಅಸ್ತಿತ್ವದಲ್ಲಿವೆ. ಧಾರ್ಮಿಕ ಮತ್ತು ಸಮುದಾಯದ ಉದ್ದೇಶಗಳಿಗೆ ಸಂಬಂಧಿಸಿದ ಈ ಪ್ರದೇಶದಲ್ಲಿರುವ ಜಮೀನನ್ನು ಖಾಸಗಿ ಸಂಸ್ಥೆಗೆ ವರ್ಗಾಯಿಸಿರುವುದು ಸರಿಯಲ್ಲ. ವಕ್ಫ್ ಆಸ್ತಿಯ ಸಂರಕ್ಷಣೆಗೆ ಸಂಬಂಧಿಸಿದ ನಿಯಮಗಳನ್ನು ಉಲ್ಲಂಘಿಸಿ ಈ ವ್ಯವಹಾರ ನಡೆಸಲಾಗಿದೆ ಎಂದು ಆರೋಪಿಸಿದರು.

ವಕ್ಫ್ ಆಸ್ತಿಗಳ ರಕ್ಷಣೆಗಾಗಿ ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕಾಗಿದೆ. ಈ ಪ್ರಕರಣದಲ್ಲಿ ಜಮೀನಿನ ಮೂಲ ದಾಖಲೆಗಳು, ಗೆಜೆಟ್ ಅಧಿಸೂಚನೆ ಹಾಗೂ ಮಾರಾಟ ನೋಂದಣಿಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಬೇಕು. ಅಕ್ರಮ ನಡೆದಿರುವುದು ದೃಢಪಟ್ಟಲ್ಲಿ ನೋಂದಣಿಯನ್ನು ತಕ್ಷಣ ರದ್ದುಗೊಳಿಸಿ, ಜಮೀನನ್ನು ವಕ್ಫ್ ಆಸ್ತಿಯಾಗಿ ಉಳಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಅಲ್ಲದೆ, ಜಮೀನು ಮಾರಾಟ ಪ್ರಕ್ರಿಯೆಯಲ್ಲಿ ಭಾಗಿಯಾಗಿರುವವರು ಹಾಗೂ ನೋಂದಣಿಗೆ ಅವಕಾಶ ಕಲ್ಪಿಸಿದ ಅಧಿಕಾರಿಗಳ ಪಾತ್ರದ ಬಗ್ಗೆಯೂ ತನಿಖೆ ನಡೆಸಬೇಕು. ವಕ್ಫ್ ಆಸ್ತಿಗಳ ಅಕ್ರಮ ಪರಭಾರೆಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಜಿಲ್ಲಾಡಳಿತ ಮತ್ತು ವಕ್ಫ್ ಮಂಡಳಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅಕ್ಬರ್ ಹುಸೇನ್ ನಾಗುಂಡಿ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಮೌಲಾನಾ ಗುಲಾಮ್ ಬೇಗ್, ಸೈಯದ್ ಮುಸೀದ್ ಜಾನಿ, ಸೈಯದ್ ಸಮೀರ್ ಹುಸೇನಿ, ಸೈಯದ್ ಬೇಗ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ನ.8ರಂದು ದೇಸಿ ಸಂಭ್ರಮ: ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ಗೌರವ ಸನ್ಮಾನ





ರಾಯಚೂರು, ನ.6: ನಾಡಿನ ಕಲೆ, ಸಂಸ್ಕೃತಿ ಹಾಗೂ ಜಾನಪದ ಪರಂಪರೆಯನ್ನು ಪರಿಚಯಿಸುವ ಉದ್ದೇಶದಿಂದ ಕಲಾ ಸಂಕುಲ ಸಂಸ್ಥೆಯ ವತಿಯಿಂದ ನವೆಂಬರ್ 8ರಂದು ಭಾನುವಾರ ನಗರದ ರಂಗಮಂದಿರದಲ್ಲಿ ದೇಸಿ ಸಂಭ್ರಮ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಿಗೆ ಗೌರವ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಮಾರುತಿ ಬಡಿಗೇರ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಜ್ಯದ ವಿವಿಧ ಭಾಗಗಳ ಪ್ರಸಿದ್ಧ ಕಲಾವಿದರು ಒಂದೇ ವೇದಿಕೆಯಲ್ಲಿ ವೈವಿಧ್ಯಮಯ ಕಲಾ ಪ್ರದರ್ಶನ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ರಾಜ್ಯ ಸರ್ಕಾರದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಸಾಹಿತಿ ವೀರ ಹನುಮಾನ ಹಾಗೂ ಅಲೆಮಾರಿ ಸಮುದಾಯದ ಈರಣ್ಣ ರುದ್ರಾಕ್ಷಿ ಅವರನ್ನು ವಿಶೇಷವಾಗಿ ಸನ್ಮಾನಿಸಲಾಗುವುದು ಎಂದು ತಿಳಿಸಿದ್ದಾರೆ.

ಭಾನುವಾರ ಬೆಳಗ್ಗೆ 10.30 ಗಂಟೆಯಿಂದ ರಾಯಚೂರು ರಂಗಮಂದಿರದಲ್ಲಿ ಸುಗಮ ಸಂಗೀತ, ಭರತನಾಟ್ಯ, ಜಾನಪದ ನೃತ್ಯ, ಹೊನ್ನಾವರದ ಚಂಡೆ ಮೇಳ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಸ್ಥಳೀಯ ಕಲಾವಿದರಿಂದ ನೃತ್ಯ ಹಾಗೂ ಗಾಯನ ಪ್ರದರ್ಶನಗಳನ್ನೂ ಆಯೋಜಿಸಲಾಗಿದೆ. ಕಲಾ ಸಂಕುಲ ಸಂಸ್ಥೆಯೊಂದಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಯಚೂರು, ಕಲಾತಂಡಗಳ ಪ್ರಾಯೋಜಕತ್ವದ ಮೂಲಕ ಸಹಕಾರ ನೀಡಲಿದೆ ಎಂದು ವಿವರಿಸಿದ್ದಾರೆ.

ದೇಸಿ ಸಂಭ್ರಮ ಕಾರ್ಯಕ್ರಮವನ್ನು ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ್ ಉದ್ಘಾಟಿಸಲಿದ್ದಾರೆ. ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 21 ಸಾಧಕರಿಗೆ ಕನ್ನಡ ರಾಜ್ಯೋತ್ಸವ ಪುರಸ್ಕಾರವನ್ನು ಚಿತ್ರನಟಿ ಹಾಗೂ ಸಮಾಜ ಸೇವಕಿ ಡಾ. ಪೂಜಾ ರಮೇಶ್ ಪ್ರದಾನ ಮಾಡಲಿದ್ದಾರೆ.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೆ. ಶಾಂತಪ್ಪ, ರಾಷ್ಟ್ರೀಯ ಕಾಂಗ್ರೆಸ್ ಮಹಿಳಾ ಸಮಿತಿಯ ಕಾರ್ಯದರ್ಶಿ ಶ್ರೀದೇವಿ ಆರ್.ವಿ. ನಾಯಕ್, ಜಿಲ್ಲಾ ಕಾರಾಗೃಹದ ಅಧೀಕ್ಷಕಿ ಅನಿತಾ ಹಿರೇಮನಿ, ಕೆಪಿಸಿಸಿ ಕಾರ್ಯದರ್ಶಿ ಕೆ. ಅಸ್ಲಾಂ ಪಾಷಾ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೃಷ್ಣ ಶಾವಂತಗೇರೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎನ್. ಶಿವಶಂಕರ, ಸಮಾಜ ಸೇವಕರಾದ ಡಿ. ಶ್ರೀನಿವಾಸ್ ಹಾಗೂ ವಿರೂಪಾಕ್ಷಿ ಕೊರವಿಹಾಳ ಭಾಗವಹಿಸಲಿದ್ದಾರೆ.

ಜಿಲ್ಲಾ ಯಾದವ ಸಮಾಜದ ಅಧ್ಯಕ್ಷ ಕೆ. ಹನುಮಂತಪ್ಪ ಯಾದವ್ ಸೇರಿದಂತೆ ಒಟ್ಟು 21 ಸಾಧಕರನ್ನು ಗುರುತಿಸಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ನಾಡಿನ ಸಾಂಸ್ಕೃತಿಕ ವೈಭವವನ್ನು ಅನಾವರಣಗೊಳಿಸುವ ಈ ಕಾರ್ಯಕ್ರಮದಲ್ಲಿ ಕಲಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕಲಾ ಸಂಕುಲ ಸಂಸ್ಥೆಯ ಕಾರ್ಯದರ್ಶಿ ಹಾಗೂ ಕಾರ್ಯಕ್ರಮದ ಆಯೋಜಕ ಮಾರುತಿ ಬಡಿಗೇರ್ ಮನವಿ ಮಾಡಿದ್ದಾರೆ.

ನ.7ರಂದು ಶಂಭಲ ಸಂಗೀತ ಸಮ್ಮೇಳನ: ಶಾಸ್ತ್ರೀಯ ಸಂಗೀತ, ಭರತನಾಟ್ಯದ ಕಲಾವೈಭವ



ರಾಯಚೂರು: ಭಾರತೀಯ ಶಾಸ್ತ್ರೀಯ ಸಂಗೀತ ಹಾಗೂ ಸಾಂಪ್ರದಾಯಿಕ ನೃತ್ಯಕಲೆಗಳ ಸಂರಕ್ಷಣೆ ಮತ್ತು ಉತ್ತೇಜನದ ಉದ್ದೇಶದಿಂದ ನವೆಂಬರ್ 7ರಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಶಂಭಲ ಮಾಸ್ಟರ್ಸ್ ಸಂಗೀತ ಸಮ್ಮೇಳನ ಆಯೋಜಿಸಲಾಗಿದೆ ಎಂದು ವಿಶ್ವ ಕುಂಡಲಿನಿ ಸಂಘದ ಅಧ್ಯಕ್ಷ ಸ್ವಾಮಿ ಜ್ಞಾನಪ್ರಭು ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶಾಖಪಟ್ಟಣಂನ ತಾರಾಕೇಶ್ವರ ಫೌಂಡೇಷನ್ ಹಾಗೂ ಗ್ರೀನ್ ರಾಯಚೂರು ಸಂಸ್ಥೆಯ ಸಹಯೋಗದಲ್ಲಿ ಈ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ದೇಶದ ವಿವಿಧ ಭಾಗಗಳ ಪ್ರತಿಭಾನ್ವಿತ ಕಲಾವಿದರು ಭಾಗವಹಿಸಲಿದ್ದು, ಸಂಗೀತ ಮತ್ತು ನೃತ್ಯಪ್ರಿಯರಿಗೆ ವಿಶಿಷ್ಟ ಕಲಾನುಭವ ನೀಡುವ ಉದ್ದೇಶ ಹೊಂದಲಾಗಿದೆ ಎಂದು ಹೇಳಿದರು.

ಭಾರತೀಯ ಸಂಗೀತ ಮತ್ತು ನೃತ್ಯ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಸಂಸ್ಥೆಯು ಕಳೆದ 12 ವರ್ಷಗಳಿಂದ ನಿರಂತರವಾಗಿ ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿದೆ. ಈ ಅವಧಿಯಲ್ಲಿ ದೇಶದ ವಿವಿಧೆಡೆ ಸುಮಾರು 800 ಸಂಗೀತ ಹಾಗೂ ನೃತ್ಯ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಲಾಗಿದೆ. ಕಲಾವಿದರಿಗೆ ಸೂಕ್ತ ವೇದಿಕೆ ಕಲ್ಪಿಸುವುದರ ಜೊತೆಗೆ ಯುವಜನರಲ್ಲಿ ಶಾಸ್ತ್ರೀಯ ಕಲೆಗಳ ಬಗ್ಗೆ ಆಸಕ್ತಿ ಬೆಳೆಸುವುದು ಸಂಸ್ಥೆಯ ಪ್ರಮುಖ ಆಶಯವಾಗಿದೆ ಎಂದು ವಿವರಿಸಿದರು.

ಸಮ್ಮೇಳನದಲ್ಲಿ ಮೂರು ಪ್ರಮುಖ ಕಲಾ ಪ್ರದರ್ಶನಗಳು ನಡೆಯಲಿವೆ. ಬೆಳಗಾವಿಯ ಬಾಲಪ್ರತಿಭೆ ಅನಘಾ ಸುಖಟಣಕರ್ ಅವರಿಂದ ಹಿಂದೂಸ್ತಾನಿ ಶಾಸ್ತ್ರೀಯ ಸಿತಾರ್ ವಾದನ ನಡೆಯಲಿದೆ. ಖ್ಯಾತ ಕಲಾವಿದ ಪಂಡಿತ ನರಸಿಂಹಲು ವಡವಾಟಿ ಅವರಿಂದ ಹಿಂದೂಸ್ತಾನಿ ಕ್ಲಾರಿನೆಟ್ ವಾದನ ಹಾಗೂ ಗಾಯನ ಕಾರ್ಯಕ್ರಮ ಜರುಗಲಿದೆ. ಇವರಿಗೆ ಹೈದರಾಬಾದ್‌ನ ತಬಲಾ ಕಲಾವಿದ ಎಂ.ಎಸ್. ಪವನ್ ಕುಮಾರ್ ಸಾಥ್ ನೀಡಲಿದ್ದಾರೆ.


ಇದರೊಂದಿಗೆ ಹೈದರಾಬಾದ್‌ನ ನೃತ್ಯ ಕಲಾವಿದೆ ರೇವತಿ ಕೃಷ್ಣ ಹಾಗೂ ಅವರ ತಂಡದಿಂದ ಭರತನಾಟ್ಯ ಪ್ರದರ್ಶನ ನಡೆಯಲಿದ್ದು, ಶಾಸ್ತ್ರೀಯ ಸಂಗೀತದ ಮಾಧುರ್ಯ ಮತ್ತು ನೃತ್ಯಕಲೆಯ ಸೊಬಗನ್ನು ಒಂದೇ ವೇದಿಕೆಯಲ್ಲಿ ಆಸ್ವಾದಿಸುವ ಅವಕಾಶ ಕಲಾರಸಿಕರಿಗೆ ದೊರೆಯಲಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕಿನ ಡೊಂಗರಾಂಪುರ ಗ್ರಾಮದಲ್ಲಿ ಟ್ರಸ್ಟ್ ವತಿಯಿಂದ ಅತ್ಯಾಧುನಿಕ ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಕೇಂದ್ರ ನಿರ್ಮಾಣ ಕಾರ್ಯ ಕೈಗೊಳ್ಳಲಾಗಿದೆ. ಆಧ್ಯಾತ್ಮಿಕ ಚಿಂತನೆ, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ಭಾರತೀಯ ಪರಂಪರೆಯ ಕಲಾ ಪ್ರಕಾರಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಈ ಕೇಂದ್ರವನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಯೋಜನೆಗೆ ಹಲವು ದಾನಿಗಳು ನೆರವು ನೀಡುತ್ತಿದ್ದು, ಅವರ ಸಹಕಾರದಿಂದ ನಿರ್ಮಾಣ ಕಾರ್ಯ ಮುಂದುವರಿದಿದೆ ಎಂದು ಸ್ವಾಮಿ ಜ್ಞಾನಪ್ರಭು ಮಾಹಿತಿ ನೀಡಿದರು.

ರಾಯಚೂರು ನಗರ ಹಾಗೂ ಜಿಲ್ಲೆಯ ಸಂಗೀತಾಸಕ್ತರು, ಕಲಾಭಿಮಾನಿಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಪದಾಧಿಕಾರಿಗಳಾದ ಅಶೋಕ ಪಾಟೀಲ್ ಅತ್ತನೂರು, ಲಾಲ್‌ಜೀ ಪಟೇಲ್, ರಮೇಶಕುಮಾರ ಹಾಗೂ ರಾಜೇಂದ್ರ ಕುಮಾರ ಶಿವಾಳೆ ಉಪಸ್ಥಿತರಿದ್ದರು.

ಮಕ್ಕಳಲ್ಲಿ ಸಾಹಿತ್ಯ ಓದುವ ಅಭಿರುಚಿ ಬೆಳೆಸುವುದು ಅಗತ್ಯ: ಶಂಕರ ದೇವರು ಹಿರೇಮಠ



ದೇವದುರ್ಗ: ಆಧುನಿಕ ತಂತ್ರಜ್ಞಾನದ ಯುಗದಲ್ಲಿ ವಿದ್ಯಾರ್ಥಿಗಳು ಪಠ್ಯಪುಸ್ತಕಗಳ ಅಧ್ಯಯನದ ಜೊತೆಗೆ ಸಾಹಿತ್ಯ ಕೃತಿಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಸಾಹಿತ್ಯದ ಓದು ಮಕ್ಕಳಲ್ಲಿ ಏಕಾಗ್ರತೆ, ಕಲ್ಪನಾಶಕ್ತಿ ಹಾಗೂ ಸೃಜನಶೀಲತೆಯನ್ನು ವೃದ್ಧಿಸಲು ಸಹಕಾರಿಯಾಗುತ್ತದೆ ಎಂದು ಮಕ್ಕಳ ಸಾಹಿತಿ ಹಾಗೂ ಕಾವ್ಯ ಕಮ್ಮಟದ ನಿರ್ದೇಶಕ ಶಂಕರ ದೇವರು ಹಿರೇಮಠ ಹೇಳಿದರು.

ತಾಲೂಕಿನ ಮಸರಕಲ್ ಗ್ರಾಮದ ಶ್ರೀ ಮುರುಘೇಂದ್ರ ಸರ್ಕಾರಿ ಪ್ರೌಢಶಾಲೆಯಲ್ಲಿ ಮಕ್ಕಳ ಸಾಹಿತ್ಯ ಪರಿಷತ್ತು ರಾಯಚೂರು ಹಾಗೂ ಚೆಲುವ ಚಿಣ್ಣರು ಮಕ್ಕಳ ಸಾಹಿತ್ಯ ಪತ್ರಿಕೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಒಂದು ದಿನದ ಮಕ್ಕಳ ಕಾವ್ಯ ಕಮ್ಮಟದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯ ಸಾಹಿತಿಗಳು ಮಕ್ಕಳ ಸಾಹಿತ್ಯ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡಿದ್ದು, ಜಿಲ್ಲೆಯ ಸಾಹಿತ್ಯ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದೆ. ವಿದ್ಯಾರ್ಥಿಗಳು ಚಿಕ್ಕ ವಯಸ್ಸಿನಿಂದಲೇ ಕವಿತೆ, ಕಥೆ ಹಾಗೂ ವಿವಿಧ ಸಾಹಿತ್ಯ ಪ್ರಕಾರಗಳನ್ನು ಓದುವ ಮೂಲಕ ತಮ್ಮಲ್ಲಿರುವ ಸೃಜನಾತ್ಮಕ ಪ್ರತಿಭೆಯನ್ನು ಗುರುತಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಮ್ಮಟವನ್ನು ಉದ್ಘಾಟಿಸಿದ ಶಾಲೆಯ ಮುಖ್ಯಗುರು ರವಿಶಂಕರ ಮಾತನಾಡಿ, ಮಕ್ಕಳು ತರಗತಿಯ ಕಲಿಕೆಗೆ ಮಾತ್ರ ಸೀಮಿತವಾಗದೆ ಸಾಹಿತ್ಯ ಕೃತಿಗಳ ಅಧ್ಯಯನ ಹಾಗೂ ಸಾಹಿತ್ಯಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ಕಾವ್ಯ ವಾಚನ, ಕನ್ನಡದ ಪ್ರಸಿದ್ಧ ಸಾಹಿತಿಗಳ ಕೃತಿಗಳ ಓದು ಮತ್ತು ಸಾಹಿತ್ಯ ಕಮ್ಮಟಗಳಲ್ಲಿ ಪಾಲ್ಗೊಳ್ಳುವುದರಿಂದ ಭಾಷಾ ಪ್ರೌಢಿಮೆ ಹಾಗೂ ಅಭಿವ್ಯಕ್ತಿ ಸಾಮರ್ಥ್ಯ ಹೆಚ್ಚುತ್ತದೆ ಎಂದು ಅಭಿಪ್ರಾಯಪಟ್ಟರು.

ಕಮ್ಮಟದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳಿಗೆ ಕವಿತೆ ರಚನೆಯ ವಿಧಾನ, ವಿಷಯದ ಆಯ್ಕೆ, ಕಾವ್ಯದ ವಿನ್ಯಾಸ ಹಾಗೂ ಸೃಜನಶೀಲ ಬರವಣಿಗೆಯ ಕುರಿತು ಮಾರ್ಗದರ್ಶನ ನೀಡಲಾಯಿತು. ವಿದ್ಯಾರ್ಥಿಗಳು ತಾವು ರಚಿಸಿದ ಸ್ವರಚಿತ ಕವಿತೆಗಳನ್ನು ವಾಚಿಸುವ ಮೂಲಕ ತಮ್ಮ ಸಾಹಿತ್ಯ ಪ್ರತಿಭೆಯನ್ನು ಪ್ರದರ್ಶಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಸಾಹಿತಿಗಳಾದ ನೀಲಕಂಠ ಮಳಿಮಠ, ಮೈನುದ್ದೀನ್, ಅಭಿಷೇಕ್ ಬಳೆ ಹಾಗೂ ಅಭಿಷೇಕ ಸ್ವಾಮಿ ಭಾಗವಹಿಸಿ ಮಕ್ಕಳ ಸಾಹಿತ್ಯದ ಹಿನ್ನೆಲೆ, ಸಾಹಿತ್ಯ ರಚನೆಯ ವಿಧಾನಗಳು, ಸೃಜನಶೀಲ ಬರವಣಿಗೆ, ಮಕ್ಕಳ ಸಾಹಿತ್ಯ ಪತ್ರಿಕೆಗಳ ಪಾತ್ರ ಹಾಗೂ ಮಕ್ಕಳಲ್ಲಿ ಸಾಹಿತ್ಯಾಸಕ್ತಿ ಬೆಳೆಸುವ ಅಗತ್ಯದ ಕುರಿತು ವಿವಿಧ ಗೋಷ್ಠಿಗಳನ್ನು ನಡೆಸಿಕೊಟ್ಟರು.

ಕಮ್ಮಟದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ಹಾಗೂ ಸಾಹಿತ್ಯ ಕೃತಿಗಳನ್ನು ವಿತರಿಸಲಾಯಿತು. ಇದೇ ಸಂದರ್ಭದಲ್ಲಿ ಎಸ್ ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ 125ಕ್ಕೆ 125 ಅಂಕಗಳನ್ನು ಗಳಿಸಿ ಸಾಧನೆ ಮಾಡಿದ ವಿದ್ಯಾರ್ಥಿನಿಯರಾದ ಪ್ರಿಯಾಂಕಾ ಮತ್ತು ಫಾತಿಮಾ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ನಾಗರಾಜ ಪಾಟೀಲ, ಗಿರಿಯಪ್ಪ, ಶಾಂತಪ್ಪ, ಶಕೀಲ್ ಅಹಮದ್, ಸೋಫಿ ಸಾಬ್, ಶೇಖ್ ಅಲಿ, ನಾಗರಾಜ ಹಾಗೂ ನಾಗರತ್ನ ಉಪಸ್ಥಿತರಿದ್ದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K